• ಮಂಡ್ಯ • ಮೈಸೂರು • ಚಾಮರಾಜನಗರ • ಹಾಸನ • ರಾಮನಗರ • ತುಮಕೂರು • ಬೆಂಗಳೂರು ಗ್ರಾಮಾಂತರ • ಬೆಂಗಳೂರು ನಗರ

ಕಾಯಕ ಯೋಗಿ

ಸಂಪಾದಕರು: ಅರುಣಜ್ಯೋತಿ ಬಿ.ಕೆ. KAYAKA YOGI- Regional Daily ಪ್ರಾದೇಶಿಕ ದಿನಪತ್ರಿಕೆ

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ MONDYA | ಸಂಪುಟ VOLUME 07 | ಸಂಚಿಕೆ ISSUE 48 | ಬುಧವಾರ WEDNESDAY | 29-05-2024 | ಪುಟಗಳು Pages 06 | ಬೆಲೆ Rates 02 | ಸಂಪರ್ಕ 9980605484

ಬೆಂಗಳೂರಿಗೆ $1,000 ಕೋಟಿ ಅನುದಾನ ತಕ್ಷಣವೇ ಬಿಡುಗಡೆಗೆ ಆಗ್ರಹ

ಪದಗೆಟ್ಟ ಕಾನೂನು ಸುವ್ಯವಸ್ಥೆ



ಕಾಯಕಯೋಗಿ ಸುದ್ದಿ

ಬೆಂಗಳೂರು: ರಾಜ್ಯ ರಾಜಧಾನಿ ಬೆಂಗಳೂರು ಒಂದೇ ಒಂದು ಮಳೆಗೆ ಸಾಕಷ್ಟು ಅವಾಂತರಗಳು ಸೃಷ್ಟಿಯಾಗಿವೆ. ರಸ್ತೆಗಳು ಗುಂಡಿ ಬಿದ್ದು, ಜನರ ಬಲಿಗೆ ಕಾಯುತ್ತಿವೆ. ತಗ್ಗು ಪ್ರದೇಶ, ದೊಡ್ಡ ದೊಡ್ಡ ಅಪಾರ್ಟ್‌ಮೆಂಟ್ ಗಳಲ್ಲಿ ಮಳೆ ನೀರು ನುಗ್ಗಿ ತೊಂದರೆ ಉಂಟಾಗಿದೆ. ಈ ಸಂಬಂಧ ಅಗತ್ಯ ಎಚ್ಚರಿಕೆ ವಹಿಸುವಂತೆ ರಾಜ್ಯ ಬಿಜೆಪಿ ಒತ್ತಾಯಿಸಿದೆ.

ರಾಜಧಾನಿ ಬೆಂಗಳೂರಿನ ಅಭಿವೃದ್ಧಿಗೆ ಕೂಡಲೇ 1,000 ಕೋಟಿ ರೂ. ಹಣ ಬಿಡುಗಡೆ ಮಾಡಬೇಕು. ಮಳೆ ಬರುವ ಮುನ್ನವೇ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಲು ಅಗತ್ಯ ಕಾಮಗಾರಿಗಳನ್ನು ನಡೆಸಬೇಕು ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದರು.

ಸಿಲಿಕಾನ್ ಸಿಟಿ ಬೆಂಗಳೂರಿನ ಅಭಿವೃದ್ಧಿಗೆ ನಿರ್ಲಕ್ಷ್ಯ ತೋರುತ್ತಿರುವ ಕಾಂಗ್ರೆಸ್ ಸರ್ಕಾರದ ದುರಾಡಳಿತದ ವಿರುದ್ಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಬಿಜೆಪಿ ವತಿಯಿಂದ ಮಂಗಳವಾರ ಬೃಹತ್ ಪ್ರತಿಭಟನೆ ನಡೆಯಿತು. ಪ್ರತಿಭಟನೆ ವೇಳೆ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಬೆಂಗಳೂರನ್ನು ಕಡೆಗಣಿಸಿದೆ. ರಸ್ತೆಗಳಲ್ಲಿ ಗುಂಡಿ, ಕಸದ ರಾಶಿ ಎಲ್ಲೆಡೆ ಕಾಣುತ್ತಿದೆ. ಪೌರ ಕಾರ್ಮಿಕರಿಗೆ ಹಾಗೂ ಗುತ್ತಿಗೆದಾರರಿಗೆ ನೀಡಲು ಹಣವಿಲ್ಲ. ರಾಜಧಾನಿಯಲ್ಲಿ ಒಂದೇ ಒಂದು ರೂಪಾಯಿ ಕಾಮಗಾರಿ ನಡೆದಿಲ್ಲ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ನಗರ ವೀಕ್ಷಣೆ ಮಾಡಿದ್ದಾರೆಯೇ ಹೊರತು, ಅಭಿವೃದ್ಧಿಗೆ ಹಣ ನೀಡಿಲ್ಲ ಎಂದು ದೂರಿದರು.

ಅಧಿಕಾರಿ ಸಾವಿಗೆ ಸರ್ಕಾರ ಕಾರಣ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದಕ್ಕೆ ಸಚಿವರೇ ಕಾರಣರಾಗಿದ್ದಾರೆ. ಲಂಚ ತೆಗೆದುಕೊಂಡಿದ್ದರೆ ರಾಜೀನಾಮೆ ನೀಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಇಲ್ಲಿ 187 ಕೋಟಿ ರೂ. ಹಗರಣ ನಡೆದಿದ್ದು, ಇದಕ್ಕೆ ಯಾರೆಲ್ಲ ಕಾರಣವೆಂದು ಅಧಿಕಾರಿ ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿದ್ದಾರೆ. 187 ಕೋಟಿ ಲೂಟಿ ಹೊಡೆದ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು. ಹಿಂದೆ ಕೆ.ಎಸ್.ಈಶ್ವರಪ್ಪನವರ ರಾಜೀನಾಮೆ ಕೇಳಿದ ಕಾಂಗ್ರೆಸ್ ಸಚಿವರು ಹಾಗೂ ಮುಖ್ಯಮಂತ್ರಿ ರಾಜೀನಾಮೆ ಕೊಡಲಿ. ಇದರ ವಿರುದ್ಧ ಬಿಜೆಪಿ ತೀವ್ರ ಹೋರಾಟ ಮಾಡಲಿದೆ ಎಂದು ಅವರು ಎಚ್ಚರಿಸಿದರು.

ಕಣ್ಮುಚ್ಚಿ ಕುಳಿತ ಕಾನೂನು ವ್ಯವಸ್ಥೆ



ರಾಜ್ಯದ ಕಾನೂನು ಸುವ್ಯವಸ್ಥೆ ಅತ್ಯಂತ ಹದಗೆಟ್ಟಿದೆ. ತಕ್ಷಣ ಗುಂಡಿ ಮುಚ್ಚುವ ಕಾರ್ಯ ಕೈಗೆತ್ತಿಕೊಳ್ಳದಿದ್ದರೆ, ಭ್ರಷ್ಟಾಚಾರ ಹೀಗೇ ಮುಂದುವರೆದರೆ ಉಗ್ರ ಹೋರಾಟ ಅನಿವಾರ್ಯವಾಗುತ್ತದೆ ಎಂದು ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಎಚ್ಚರಿಕೆ ನೀಡಿದ್ದಾರೆ. ಬಿಜೆಪಿ ಬೆಂಗಳೂರು ಮಹಾನಗರದ ವತಿಯಿಂದ ನಗರದ ಸ್ವಾತಂತ್ರ್ಯ ಉದ್ಯಾನವನದ ಬಳಿ ಇಂದು ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬೀದಿ ರಂಪಾಟಗಳು ಗೂಂಡಾ ಪ್ರವೃತ್ತಿ ಹೆಚ್ಚಾಗಿದ್ದು, ಮನೆಯಿಂದ ಹೊರಟ ಮಹಿಳೆಯರು, ಯುವಜನರು ಮನೆ ಸೇರುವ ಧೈರ್ಯ ಇಲ್ಲವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಹೊಂಡಗುಂಡಿಯಲ್ಲಿ ಬಿದ್ದು ಸಾಯುವ ಭಯದಿಂದ ಹಿರಿಯರು ನೆಮ್ಮದಿಯಿಂದ ಓಡಾಡಲು ಸಾಧ್ಯವಿಲ್ಲವಾಗಿದೆ ಎಂದರು.

ಕೆಎಂವಿಐಎಸ್‌ಟಿಡಿಸಿ ಅಧಿಕಾರಿ ಆತ್ಮಹತ್ಯೆ

ಮೂವರು ಉನ್ನತ ಅಧಿಕಾರಿಗಳ ವಿರುದ್ಧ ಎಫ್‌ಐಆರ್, ಆರೋಪಿಗಳು ನಾಪತ್ತೆ!

ಕಾಯಕಯೋಗಿ ಸುದ್ದಿ



ಬೆಂಗಳೂರು: ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ (ಕೆಎಂವಿಐಎಸ್‌ಟಿಡಿಸಿ) ಅಧಿಕಾರಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮೂವರು ಉನ್ನತ ಅಧಿಕಾರಿಗಳ ವಿರುದ್ಧ ಈಗಾಗಲೇ ದಾಖಲಾಗಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ (ಕೆಎಂವಿಐಎಸ್‌ಟಿಡಿಸಿ) ಅಕೌಂಟ್ಸ್ ಅಧಿಕಾರಿ ಚಂದ್ರಶೇಖರನ್ ಪಿ ಆತ್ಮಹತ್ಯೆಗೆ ಶರಣಾಗಿದ್ದು, ಆತ್ಮಹತ್ಯೆಗೂ ಮುನ್ನ ಡೆತ್ ನೋಟ್ ಬರೆದಿದ್ದಾರೆ. ಡೆತ್ ನೋಟ್‌ನಲ್ಲಿ ತಮ್ಮ ಸಾವಿಗೆ ಕಾರಣ ಎಂದು ಹೇಳಿ ಮೂವರು ಉನ್ನತ ಅಧಿಕಾರಿಗಳ ಹೆಸರು ಉಲ್ಲೇಖಿಸಿದ್ದು, ಇದರ ಆಧಾರದ ಮೇಲೆ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಕೆಎಂವಿಐಎಸ್‌ಟಿಡಿಸಿ ಅಧಿಕಾರಿ 48 ವರ್ಷದ ಚಂದ್ರಶೇಖರನ್ ಪಿ ಅವರು ತಮ್ಮ ಸ್ವಗ್ರಾಮದಲ್ಲಿರುವ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ ಎಂದು ಪೊಲೀಸರು ತಿಳಿಸಿದ್ದು, ಬೆಂಗಳೂರಿನಲ್ಲಿ ನಿಯೋಜಿತರಾಗಿರುವ ಚಂದ್ರಶೇಖರನ್ ಪಿ ಅವರು ಭಾನುವಾರ ಸಂಜೆ ತಮ್ಮ ನಿವಾಸದಲ್ಲಿ ಸೀಲಿಂಗ್ ಫ್ಯಾನ್‌ಗೆ ನೇಣು ಹಾಕಿಕೊಂಡು ಸಾವಿಗೆ ಶರಣಾಗಿದ್ದಾರೆ.

ಸಾವಿಗೂ ಮುನ್ನ ಅವರು ಸುಮಾರು ಆರು ಪುಟಗಳ ಡೆತ್ ನೋಟ್ ಬರೆದಿಟ್ಟಿದ್ದಾರೆ. ಸೂಸೈಡ್ ನೋಟ್‌ನಲ್ಲಿ, ಅವರು ತಮ್ಮ ಸಾವಿಗೆ ಮೂವರು ಹಿರಿಯ ಸಹೋದ್ಯೋಗಿಗಳು ಕಾರಣರಾಗಿದ್ದು, ಅವರು ಸಂಸ್ಥೆಯ ಸುಮಾರು 87 ಕೋಟಿ ರೂಪಾಯಿ ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಚಂದ್ರಶೇಖರನ್ ಆರೋಪಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಮೂವರು ಅಧಿಕಾರಿಗಳು ವಿವಿಧ ಠೇವಣಿಗಳ ಮೂಲಕ ವೈಯಕ್ತಿಕ ಲಾಭಕ್ಕಾಗಿ ಸುಮಾರು 87 ಕೋಟಿ ರೂಪಾಯಿ ದುರುಪಯೋಗ ಪಡಿಸಿಕೊಂಡಿದ್ದು, ಮಾತ್ರವಲ್ಲದೇ ತನಗೆ ಕಿರುಕುಳ ನೀಡಿದ್ದಾರೆ. ಪಾಲಿಕೆಯ ಪ್ರಾಥಮಿಕ ಖಾತೆಯಿಂದ ಲೆಕ್ಕಕ್ಕೆ ಸಿಗದ ಹಣವನ್ನು ಬೇರೆಡೆಗೆ ತಿರುಗಿಸಲು ಸಮಾನಾಂತರ ಬ್ಯಾಂಕ್ ಖಾತೆ ತೆರೆಯುವಂತೆ ಹಿರಿಯ ಅಧಿಕಾರಿಗಳು ಒತ್ತಾಯಿಸಿದ್ದಾರೆ.

ಎಂಜಿ ರಸ್ತೆಯಲ್ಲಿರುವ ಬ್ಯಾಂಕ್ ಶಾಖೆಯಲ್ಲಿ ಗ್ರಾಹಕರು ಉಳಿತಾಯ ಮತ್ತು ಚಾಲ್ತಿ ಖಾತೆಗಳ ನಡುವೆ ಹಣವನ್ನು ವರ್ಗಾಯಿಸಲು ಮತ್ತು ಸ್ಥಿರ ಠೇವಣಿ ಖಾತೆಗಳನ್ನು ಲಿಂಕ್ ಮಾಡಲು ಗ್ರಾಹಕರಿಗೆ ಅನುಮತಿಸುವ ಸ್ವೀಪ್-ಇನ್ ಮತ್ತು ಸ್ವೀಪ್-ಔಟ್ ಖಾತೆಯನ್ನು ತೆರೆಯಲು ಸಚಿವರು ಮತ್ತು ಅಧಿಕಾರಿಯಿಂದ ನಿರ್ದೇಶಿಸಲಾಗಿದೆ ಎಂದು ಅವರು ಆರೋಪಿಸಿದ್ದಾರೆ. ಇದರಿಂದ ಬೇಸತ್ತು ತಾವು ಆತ್ಮಹತ್ಯೆಗೆ ಶರಣಾಗುತ್ತಿರುವುದಾಗಿ ಚಂದ್ರಶೇಖರ್ ಡೆತ್ ನೋಟ್ ನಲ್ಲಿ ಆರೋಪಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

ವಾರಾಂತ್ಯದ ನಿಮಿತ್ತ ಶುಕ್ರವಾರ ಬೆಂಗಳೂರಿನಿಂದ ಸ್ವಗ್ರಾಮಕ್ಕೆ ಮರಳಿದ ಅವರು ಭಾನುವಾರ ಮನೆಯಲ್ಲಿ ಯಾರೂ ಇಲ್ಲದ ವೇಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅದೇ ದಿನ ಸಂಜೆ ಅವರ ಪತ್ನಿ ಕವಿತಾ ಮತ್ತು ಮಗ ಭದ್ರಾವತಿಯಿಂದ ಕುಟುಂಬ ಕಾರ್ಯಕ್ರಮಕ್ಕೆ ತೆರಳಿದ್ದ ಮನೆಗೆ ಹಿಂದಿರುಗಿದಾಗ ಘಟನೆ ಬೆಳಕಿಗೆ ಬಂದಿದೆ. ಆರಂಭದಲ್ಲಿ ಶಿವಮೊಗ್ಗದ ವಿನೋಬಾ ನಗರ ಪೊಲೀಸ್ ಠಾಣೆಯಲ್ಲಿ ಅಸಹಜ ಸಾವಿನ ಪ್ರಕರಣ ದಾಖಲಿಸಿಕೊಂಡಿದ್ದೆವು. ಆದರೆ ನಂತರ ಡೆತ್ ನೋಟ್ ಸಿಕ್ಕಾಗ ಮೂವರು ಸರ್ಕಾರಿ ಅಧಿಕಾರಿಗಳ ವಿರುದ್ಧ ಭಾರತೀಯ ದಂಡ ಸಂಹಿತೆಯ 306 (ಆತ್ಮಹತ್ಯೆಗೆ ಪ್ರಚೋದನೆ) ಅಡಿಯಲ್ಲಿ ಪ್ರಕರಣ ದಾಖಲಿಸಿದ್ದೇವೆ ಎಂದು ಅಧಿಕಾರಿ ತಿಳಿಸಿದರು.

ಪ್ರಜ್ವಲ್ ರೇವಣ್ಣ ಎಸ್‌ಐಟಿ ಮುಂದೆ ಹಾಜರಾಗಿ, ತನಿಖೆ ಎದುರಿಸಬೇಕು:

ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ



ಬೆಂಗಳೂರು: ಲೈಂಗಿಕ ಕಿರುಕುಳ ಆರೋಪ ಎದುರಿಸುತ್ತಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರು ರಾಜ್ಯದ ತನಿಖಾ ತಂಡದ (ಎಸ್‌ಐಟಿ) ಮುಂದೆ ಹಾಜರಾಗಿ ತನಿಖೆ ಎದುರಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸೋಮವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣ ಅವರು ಈ ಪ್ರಕರಣದಲ್ಲಿ ಸ್ಪಷ್ಟ ಹೇಳಿಕೆ ನೀಡಬೇಕು. ಅವರು ಎಸ್‌ಐಟಿ ತನಿಖೆ ಎದುರಿಸಬೇಕು. ಇದು ನಮ್ಮ ಬೇಡಿಕೆಯೂ ಹೌದು ಎಂದು ಹೇಳಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಒಂದು ವರ್ಷ ಪೂರೈಸಿದ್ದು, ಅದರ ಸಾಧನೆ ದೊಡ್ಡ ಶೂನ್ಯವಾಗಿದೆ. ಯಾವುದೇ ಅಭಿವೃದ್ಧಿಯಾಗಿಲ್ಲ.ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಇಲ್ಲಿ ಯಾವುದಾದರೂ ಸರ್ಕಾರ ಇದೆಯೋ ಇಲ್ಲವೋ ಎಂಬ ಪ್ರಶ್ನೆಯನ್ನು ಜನತೆ ಕೇಳುತ್ತಿದ್ದಾರೆ. ಸಿಎಂ ಮತ್ತು ಗೃಹ ಸಚಿವರು ಇದರ ಬಗ್ಗೆ ತಲೆಕೆಡಿಸಿಕೊಂಡಿಲ್ಲ ಎಂದು ದೂರಿದರು.

ಮಂಗಳವಾರ ಗೃಹ ಸಚಿವ ಜಿ. ಪರಮೇಶ್ವರ ಮಾತನಾಡಿ, ಪ್ರಜ್ವಲ್ ಅವರು ಎಸ್‌ಐಟಿ ಮುಂದೆ ಹಾಜರಾಗಲು ಒಪ್ಪಿಗೆ ನೀಡಿರುವುದರಿಂದ ಈಗ ಸತ್ಯವನ್ನು ಕಂಡುಹಿಡಿಯಬೇಕಾಗಿದೆ. ನಾನು ವಿಡಿಯೋ ನೋಡಿದ್ದೇನೆ. ಕಾನೂನು ಪ್ರಕ್ರಿಯೆ ಮುಂದುವರಿಯುತ್ತದೆ. ಅವರಿಗೆ ಎಲ್ಲ ನೋಟಿಸ್‌ಗಳನ್ನು ನೀಡಲಾಗಿದೆ ಮತ್ತು ಈಗ ನಾವು ಸತ್ಯವನ್ನು ಕಂಡುಹಿಡಿಯಬೇಕಿದೆ ಎಂದು ಅವರು ಹೇಳಿದರು. ಪ್ರಜ್ವಲ್ ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯೊಬ್ಬರ ದೂರಿನ ಮೇರೆಗೆ ಲೈಂಗಿಕ ಕಿರುಕುಳ ಮತ್ತು ಕ್ರಿಮಿನಲ್ ಬೆದರಿಕೆ ಆರೋಪದ ಮೇಲೆ ಕರ್ನಾಟಕ ಸರ್ಕಾರ ರಚಿಸಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ಪ್ರಕರಣದ ತನಿಖೆ ನಡೆಸುತ್ತಿದೆ.

ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಕಟ್ಟಡ ನೆಲಸಮ!

ಕಾಯಕಯೋಗಿ ಸುದ್ದಿ



ಮೈಸೂರು: ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮತ್ತು ಪರಂಪರೆ ಸಮಿತಿಯು 129 ಪಾರಂಪರಿಕ ಕಟ್ಟಡ ರಚನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಿದ್ದು, 11 ಪಾರಂಪರಿಕ ಕಟ್ಟಡಗಳನ್ನು ತಕ್ಷಣ ಮರುಸ್ಥಾಪಿಸುವಂತೆ ಶಿಫಾರಸು ಮಾಡಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಲ್ಯಾನ್ಸ್‌ಡೌನ್ ಕಟ್ಟಡ, ದೇವರಾಜ ಮಾರುಕಟ್ಟೆ, ಮಹಾರಾಣಿ ಕಾಲೇಜು ಮತ್ತು ಹಾಸ್ಟೆಲ್ ಕಟ್ಟಡ ನೆಲಸಮ ಮಾಡಲು ನಿರ್ಧರಿಸಿದೆ ಎಂದು ತಿಳಿದುಬಂದಿದೆ.

ಇದೇ ವೇಳೆ ಕಟ್ಟಡಗಳ ಹೊಸ ರಚನೆಗೆ ವಿವರವಾದ ಯೋಜನಾ ವರದಿಯನ್ನು ಸಿದ್ಧಪಡಿಸುವಂತೆ ಸಂಬಂದಪಟ್ಟಂತಹ ಇಲಾಖೆಗಳಿಗೆ ಸೂಚನೆ ನೀಡಿದೆ.

ಶಿಥಿಲಗೊಂಡಿರುವ ಪಾರಂಪರಿಕ ಕಟ್ಟಡಗಳ ಸಮೀಕ್ಷೆ ನಡೆಸಿದ ಪಾರಂಪರಿಕ ಸಮಿತಿಯು, ವಾಣಿ ವಿಲಾಸ ಮಾರುಕಟ್ಟೆ, ಅತ್ತಾರ ಕಚೇರಿ, ಅಗ್ನಿಶಾಮಕ ದಳದ ಕಟ್ಟಡ, ಮಹಾರಾಣಿ ವಿಜ್ಞಾನ ಕಾಲೇಜು, ಬಾಲಕಿಯರ ಸರಕಾರಿ ಶಾಲೆ, ಮಹಾರಾಜ ಕಾಲೇಜು, ಯುವರಾಜ ಕಾಲೇಜು, ಸಂಗೀತ ವಿವಿ, ಸರ್ಕಾರಿ ಬಾಲ ಗೃಹ, ಮಹಾರಾಜ ಸಂಸ್ಕೃತ ಪಾಠಶಾಲೆ ಕಟ್ಟಡಗಳನ್ನು ತಕ್ಷಣ ಮರುಸ್ಥಾಪಿಸುವಂತೆ ಶಿಫಾರಸು ಮಾಡಿದ್ದು, ಈ ಕುರಿತ ವಿಸ್ತೃತ ವರದಿನ್ನು ಜಿಲ್ಲಾಧಿಕಾರಿ ಕೆ ಏ ರಾಜೇಂದ್ರ ಅವರಿಗೆ ಸಲ್ಲಿಸಿದೆ. ತಜ್ಞರ ಸಮಿತಿಯು ಈ 11 ರಚನೆಗಳ ಜೀರ್ಣೋದ್ಧಾರಕ್ಕೆ 96,80,59,838 ರೂ.ಗಳ ವೆಚ್ಚವಾಗಲಿದೆ ಎಂದು ಅಂದಾಜಿಸಿದೆ.

ಪಾರಂಪರಿಕ ಸಮಿತಿ ಸದಸ್ಯ ಹಾಗೂ ತಜ್ಞ ಪ್ರೊ.ರಂಗರಾಜು ಅವರು ಪಾರಂಪರಿಕ ಕಟ್ಟಡಗಳ ಸ್ಥಿತಿಗತಿಯ ವರದಿಯ ಪ್ರತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಿದ್ದಾರೆ.

ಇದಕ್ಕೆ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮಂಡಿಮೊಹಲ್ಲಾದ ವಾಣಿ ವಿಲಾಸ ಮಾರುಕಟ್ಟೆ ಮತ್ತು ಚಿಕ್ಕ ಮಾರುಕಟ್ಟೆಯ ಸ್ಥಿತಿಗತಿ ಕುರಿತು ಪ್ರಶ್ನಿಸಿದರು. ಇದೇ ವೇಳೆ ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಕಟ್ಟಡ, ಮಹಾರಾಣಿ ವಿಜ್ಞಾನ ಕಾಲೇಜು ಮತ್ತು ಹಾಸ್ಟೆಲ್ ಅನ್ನು ನೆಲಸಮಗೊಳಿಸಲು ಸರ್ಕಾರ ಬದ್ಧವಾಗಿದೆ ಮತ್ತು ಈ ಆರ್ಥಿಕ ವರ್ಷದಲ್ಲಿ ನಿರ್ಮಾಣವನ್ನು ಕೈಗೆತ್ತಿಕೊಳ್ಳಲಿದೆ ಎಂದು ಹೇಳಿದರು.

ಇದೇ ರೀತಿಯ ರಚನೆಯನ್ನು ಕಾಪಾಡಿಕೊಳ್ಳಲು ಮತ್ತು ಪಾರಂಪರಿಕ ನೋಟವನ್ನು ಉಳಿಸಿಕೊಳ್ಳಲು ಸರ್ಕಾರ ಬಯಸಿದೆ, ಆದರೆ, ವ್ಯಾಪಾರಸ್ಥರು ಮತ್ತು ಮಾರುಕಟ್ಟೆಗೆ ಭೇಟಿ ನೀಡುವ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಸುರಕ್ಷತೆಯನ್ನು ಪರಿಗಣಿಸಿ ಹೊಸ ಕಟ್ಟಡವನ್ನು ನಿರ್ಮಿಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಅರವಿಂದ ಕೇಜ್ರಿವಾಲ್ ಮಧ್ಯಂತರ ಜಾಮೀನು ಅರ್ಜಿ ತಿರಸ್ಕೃತ



ನವದೆಹಲಿ: ಕೆಲವು ವೈದ್ಯಕೀಯ ಪರೀಕ್ಷೆಗಳಿಗೆ ಒಳಗಾಗಬೇಕಿರುವುದರಿಂದ ಮಧ್ಯಂತರ ಜಾಮೀನು ಅವಧಿಯನ್ನು ವಿಸ್ತರಿಸುವಂತೆ ಕೋರಿ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿಯ ತುರ್ತು ವಿಚಾರಣೆಗೆ ಸುಪ್ರೀಂ ಕೋರ್ಟ್ ಮಂಗಳವಾರ ನಿರಾಕರಿಸಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳಾದ ಡಿವೈ ಚಂದ್ರಚೂಡ್ ಅವರು ಈ ವಿಚಾರದಲ್ಲಿ ಸೂಕ್ತ ನಿರ್ಧಾರವನ್ನು ತೆಗೆದುಕೊಳ್ಳುತ್ತಾರೆ ಎಂದು ಪೀಠ ಹೇಳಿದೆ.

ನ್ಯಾಯಮೂರ್ತಿಗಳಾದ ಜೆಕೆ ಮಹೇಶ್ವರಿ ಮತ್ತು ಕೆವಿ ವಿಶ್ವನಾಥನ್ ಅವರನ್ನೊಳಗೊಂಡ ರಜಾಕಾಲದ ಪೀಠ, ಶುಕ್ರವಾರದವರೆಗೆ ದೆಹಲಿ ಸಿಎಂ ಅರ್ಜಿಯನ್ನು ನ್ಯಾಯಮೂರ್ತಿ ದೀಪಂಕರ್ ದತ್ತಾ ನೇತೃತ್ವದ ರಜಾಕಾಲದ ಪೀಠದ ಮುಂದೆ ಏಕೆ ಸಲ್ಲಿಸಲಿಲ್ಲ ಕೇಜ್ರಿವಾಲ್ ಪರ ವಕೀಲ ಅಭಿಷೇಕ್ ಮನು ಸಿಂಘ್ವಿ ಅವರನ್ನು ಪ್ರಶ್ನಿಸಿತು. ಇಂದಿನ ವಿಚಾರಣೆಯಲ್ಲಿ ವಕೀಲ ಸಿಂಘ್ವಿ ಅವರ ಹೇಳಿಕೆಗಳನ್ನು ಗಮನಿಸಿದ ಪೀಠ, 'ಮುಖ್ಯ ಪ್ರಕರಣದಲ್ಲಿ ತೀರ್ಪು ಕಾಯ್ದಿರಿಸಿರುವುದರಿಂದ ಮಧ್ಯಂತರ ಜಾಮೀನು ವಿಸ್ತರಣೆಗೆ ಸಂಬಂಧಿಸಿದಂತೆ ಕೇಜ್ರಿವಾಲ್ ಅವರ ಮನವಿಯನ್ನು ಪಟ್ಟಿ ಮಾಡುವ ಬಗ್ಗೆ ಸಿಜೆಐ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತಾರೆ' ಎಂದಿತು.

ದೆಹಲಿ ಸಿಎಂ ಅವರ ಆರೋಗ್ಯ ಸ್ಥಿತಿಯ ಬಗ್ಗೆ ತಿಳಿಯಲು ತುರ್ತು ವೈದ್ಯಕೀಯ ತಪಾಸಣೆ ಅಗತ್ಯವಿದ್ದು, ಅರ್ಜಿಯ ತುರ್ತು ವಿಚಾರಣೆ ನಡೆಸಬೇಕೆಂದು ಸಿಂಘ್ವಿ ಅವರು ಕೋರಿದರು.

ಏಳು ಹಂತದ ಚುನಾವಣೆಯ ಕೊನೆಯ ಹಂತದ ಮತದಾನ ಮುಗಿದ ಒಂದು ದಿನದ ನಂತರ ಜೂನ್ 2 ರಂದು ಕೇಜ್ರಿವಾಲ್ ಅವರು ಜೈಲು ಅಧಿಕಾರಿಗಳ ಮುಂದೆ ಶರಣಾಗಬೇಕು ಎಂದು ಕೋರ್ಟ್ ನಿರ್ದೇಶಿಸಿತ್ತು.

ಬೆಳ್ಳೂರಿನಲ್ಲಿ ಭುಗಿಲೆದ್ದ ಹಿಂದೂ-ಮುಸ್ಲಿಂ ಗಲಾಟೆ

ಕಾಯಕಯೋಗಿ ಸುದ್ದಿ



ಕಾಯಕಯೋಗಿ

29-05-2024
ಬುಧವಾರ

ವೈ.ಎ.ನಾರಾಯಣಸ್ವಾಮಿಯವರನ್ನು ಗೆಲ್ಲಿಸಲು ಕರೆ



ತುಮಕೂರು: ಶಿಕ್ಷಣ ಕ್ಷೇತ್ರವು ಅತ್ಯಂತ ಪವಿತ್ರ ಕ್ಷೇತ್ರವಾಗಿದ್ದು, ಶಿಕ್ಷಕ ವೃತ್ತಿಯೂ ಅಷ್ಟೇ ಪ್ರಾಮುಖ್ಯತೆ ಹೊಂದಿರುವ ಪವಿತ್ರ ವೃತ್ತಿಯಾಗಿದೆ. ಇಂತಹ ರಾಷ್ಟ್ರಸೇವಾ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ಶಿಕ್ಷಕರಿಗೆ ಅನ್ಯಾಯವೆಸಗುತ್ತಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧ ಸಮರ್ಥ ಹೋರಾಟ ಮಾಡಬಲ್ಲ ಸಾಮರ್ಥ್ಯವಿರುವ ಬಿ.ಜೆ.ಪಿ. ಮತ್ತು ಜೆ.ಡಿ.ಎಸ್. ಮೈತ್ರಿ ಅಭ್ಯರ್ಥಿ ವೈ.ಎ.ನಾರಾಯಣಸ್ವಾಮಿಯವರನ್ನು ಪ್ರಚಂಡ ಬಹುಮತದಿಂದ ಗೆಲ್ಲಿಸಬೇಕೆಂದು ತುಮಕೂರು ಲೋಕಸಭಾ ಕ್ಷೇತ್ರದ ಮೈತ್ರಿ ಅಭ್ಯರ್ಥಿ ಹಾಗೂ ಮಾಜಿ ಸಚಿವರಾದ ವಿ.ಸೋಮಣ್ಣ ಶಿಕ್ಷಕರಿಗೆ ಕರೆ ನೀಡಿದರು.

ಚುನಾವಣಾ ವೀಕ್ಷಕರಿಂದ ಮತಗಟ್ಟೆ ಪರಿಶೀಲನೆ



ಮಂಡ್ಯ: ಕರ್ನಾಟಕ ವಿಧಾನ ಪರಿಷತ್ತಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ನಡೆಯುವ ಚುನಾವಣೆ 2024 ಕ್ಕೆ ಸಂಬಂಧಿಸಿದಂತೆ ನೇಮಕವಾಗಿರುವ ಚುನಾವಣಾ ವೀಕ್ಷಕರಾದ ಡಾ: ರವಿಶಂಕರ್ ಅವರು ಇಂದು ಮತಗಟ್ಟೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಂಡ್ಯ ಜಿಲ್ಲೆಯಲ್ಲಿ ಜೂನ್ 3 ರಂದು ನಡೆಯಲಿರುವ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಗೆ 9 ಮತಗಟ್ಟೆಗಳನ್ನು ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದ್ದು, ವೀಕ್ಷಕರು ಇಂದು ಮಂಡ್ಯ ತಾಲ್ಲೂಕು ಪಂಚಾಯತ್ ಹಾಗೂ ತಾಲ್ಲೂಕು ಕಚೇರಿಯಲ್ಲಿ ತೆರೆಯಲಾಗುವ ಮತಗಟ್ಟೆಯಲ್ಲಿ ಮಾಡಿಕೊಂಡಿರುವ ಸಿದ್ಧತೆಗಳನ್ನು ಪರಿಶೀಲಿಸಿದರು.

ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾ ಕಾರ್ಯವನ್ನು ಯಶಸ್ವಿಗೊಳಿಸಿ

ಮಂಡ್ಯ: ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯು ಜೂನ್ 3 ರಂದು ನಡೆಯಲಿದ್ದು, ಚುನಾವಣಾ ಕಾರ್ಯವನ್ನು ಯಶಸ್ವಿಗೊಳಿಸಿ ಎಂದು ಅಬಕಾರಿ ಆಯುಕ್ತ ಹಾಗೂ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾ ವೀಕ್ಷಕರಾದ ಡಾ. ಜೆ. ರವಿಶಂಕರ್ ಅವರು ಚುನಾವಣಾ ಅಧ್ಯಕ್ಷಾಧಿಕಾರಿ ಹಾಗೂ ಮತಗಟ್ಟೆ ಅಧಿಕಾರಿಗಳಿಗೆ ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ನ ಕಾವೇರಿ ಸಭಾಂಗಣದಲ್ಲಿ ನಡೆದ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆ – 2024 ರ ಸಂಬಂಧ ಆಯೋಜಿಸಲಾಗಿದ್ದ ಅಧ್ಯಕ್ಷಾಧಿಕಾರಿ ಹಾಗೂ ಮತಗಟ್ಟೆ ಅಧಿಕಾರಿಗಳಿಗೆ ಚುನಾವಣಾ ತರಬೇತಿಯಲ್ಲಿ ಭಾಗವಹಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಕ್ ತನ್ವಿರ್ ಆಸೀಫ್, ಅಪರ ಜಿಲ್ಲಾಧಿಕಾರಿ ಡಾ. ಹೆಚ್. ಎಲ್. ನಾಗರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ದಾಸ್ತಾನು ವಿವರಗಳನ್ನು ಅನಾವರಣಗೊಳಿಸಿ: ಡಾ.ಕುಮಾರ

ಕಾಯಕಯೋಗಿ ಸುದ್ದಿ

ಮಂಡ್ಯ: ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಮಾರಾಟಗಾರರು ತಮ್ಮ ಬಳಿ ಇರುವ ದಾಸ್ತಾನುಗಳ ವಿವರವನ್ನು ಪ್ರತಿ ದಿನ ಅಂಗಡಿಯ ಮುಂಭಾಗ ಅನಾವರಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಡಾ: ಕುಮಾರ ಅವರು ತಿಳಿಸಿದರು.



ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಮಾರಾಟಗಾರರ ಸಭೆ ನಡೆಸಿ ಮಾತನಾಡಿದರು. ಪ್ರತಿ ದಿನ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಲಭ್ಯವಿರುವ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ದಾಸ್ತಾನು ವಿವರದ ಬುಲೆಟಿನ್ ನ್ನು ರೈತರ ಮಾಹಿತಿಗಾಗಿ ಬಿಡುಗಡೆ ಮಾಡಬೇಕು. ಇದರಿಂದ ಬಿತ್ತನೆ ಬೀಜ ಅಥವಾ ರಸಗೊಬ್ಬರ ಕ್ಕಾಗಿ ನೂಕು ನುಗ್ಗಲು ಉಂಟಾಗುವುದಿಲ್ಲ ಎಂದರು.

ದರಗಳ ಅನಾವರಣ ಕಡ್ಡಾಯ ಮಾರಾಟಗಾರರು ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ದರವನ್ನು ಕಡ್ಡಾಯವಾಗಿ ಅನಾವರಣಗೊಳಿಸಬೇಕು. ರೈತರು ಕೂಡ ಖರೀದಿಸಿದಾಗ ಅಧಿಕೃತ ಬಿಲ್ ನ್ನು ಪಡೆದುಕೊಳ್ಳಬೇಕು. ಅಧಿಕಾರಿಗಳು ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಗುಣಮಟ್ಟವನ್ನು ಸಹ ಪರೀಕ್ಷಿಸಬೇಕು ಎಂದರು.

ಮಾರಟಗಾರರು ರೈತರಿಗೆ ಹೆಚ್ಚು ಇಳುವರಿ ನೀಡುವಂತಹ ಹಾಗೂ ಜಿಲ್ಲೆಯ ಹವಾಮಾನಕ್ಕೆ ತಕ್ಕಂತಹ ಬಿತ್ತನೆ ಬೀಜ ಮಾರಾಟ ಮಾಡಿ. ಬೇಸಾಯ ಕ್ರಮಗಳ ಬಗ್ಗೆ ತಿಳಿಸಿ. .ಹೆಚ್ಚು ಲಾಭ ಗಳಿಸುವ ದೃಷ್ಟಿಯಿಂದ ರಸಗೊಬ್ಬರ ಮಾರಾಟಗಾರರು ಬೇರೆ ವಿಧದ ರಸಗೊಬ್ಬರವನ್ನು ರೈತರು ಖರೀದಿಸುವಂತೆ ಉತ್ತೇಜನೆ ಮಾಡುವುದು ಬೇಡ. ರೈತರ ಬೇಡಿಕೆಯಂತೆ ರಸಗೊಬ್ಬರವನ್ನು ನೀಡಿ ಎಂದರು.

ಬಿತ್ತನೆ ಬೀಜಕ್ಕಾಗಿ ಕೆಲವು ದಿನ ಅಥವಾ ವಾರ ಬೇಡಿಕೆ ಹೆಚ್ಚಿರುತ್ತದೆ. ಇಂತಹ ದಿನಗಳನ್ನು ತಿಳಿದುಕೊಂಡು ರೈತ ಸಂಪರ್ಕ ಕೇಂದ್ರಗಳು ಬೆಳಿಗ್ಗೆ 8 ಗಂಟೆಯಿಂದಲೇ ತೆರೆದು ಕಾರ್ಯನಿರ್ವಹಿಸಿ. ರೈತರೊಂದಿಗೆ ಶಾಂತ ಚಿತ್ತ ಹಾಗೂ ಸಮನ್ವಯದಿಂದ ಕಾರ್ಯನಿರ್ವಹಿಸಿ ಕೃಷಿಗೆ ಸಂಬಂಧಿಸಿದ ಅಗತ್ಯ ಮಾಹಿತಿಗಳನ್ನು ಒದಗಿಸಿ ಎಂದರು.

ಕೃಷಿ ಇಲಾಖೆ ತಾಲ್ಲೂಕು ಸಹಾಯಕ ನಿರ್ದೇಶಕರು ತಾಲ್ಲೂಕು ಮಟ್ಟದಲ್ಲಿ ರೈತ ಸಂಘಗಳೊಂದಿಗೆ ಸಭೆ ನಡೆಸಿ, ಕುಂದು ಕೊರತೆಗಳನ್ನ ಪರಿಹರಿಸಿ. ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಕೊರತೆಯಾಗದಂತೆ ನೋಡಿಕೊಳ್ಳಿ. ಯಾವುದೇ ಸಮಸ್ಯೆ ಇದ್ದಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ತಕ್ಷಣ ಪರಿಹರಿಸಿ ಎಂದರು.

ಕೃಷಿ ಇಲಾಖೆಯ ಪಾಂಡವಪುರ ವಿಭಾಗದ ಉಪನಿರ್ದೇಶಕಿ ಮಮತಾ ಅವರು ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಬೇಡಿಕೆ, ಮಳೆ, ಬಿತ್ತನೆಯ ವಿವರನ್ನು ಸಭೆಗೆ ನೀಡಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಅಶೋಕ್, ಉಪನಿರ್ದೇಶಕಿ ಮಾಲತಿ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.



ರಾಯಲ್ ಚಸ್ ಅಕಾಡೆಮಿಯಿಂದ ಪ್ರತಿಭಾ ಪುರಸ್ಕಾರ

ಕಾಯಕಯೋಗಿ ಸುದ್ದಿ

ಮಂಡ್ಯ: ಅನಾದಿ ಕಾಲದಿಂದಲೂ ಚಸ್ ಪ್ರಮುಖ ಆಟವಾಗಿದೆ, ರಾಮಾಯಣ ಮಹಾಭಾರತದ ಕಾಲದಲ್ಲೂ ಇದೆ ಎಂದು ಅಬಕಾರಿ ಇಲಾಖೆ ಮೈಸೂರು ವಿಭಾಗದ ಡಿವೈಎಸ್ಪಿ ಕೆ.ಮೋಹನ್ ಹೇಳಿದರು.

ನಗರದಲ್ಲಿರುವ ಗಾಂಧಿಭವನದಲ್ಲಿ ದಿ.ವಿಝರ್ಡ್ ಗುರು ಟ್ರಸ್ಟ್, ಮಂಡ್ಯ ರಾಯಲ್ ಚೆಸ್ ಅಕಾಡೆಮಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ವರ್ಷಿಕ ಸಂಚಿಕೆ ಬಿಡುಗಡೆ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಡಿ ವಿಶ್ವದಲ್ಲಿ ಚಸ್ ಆಟ ಉತ್ತಮ ಬೆಳೆವಣಿಗೆ ಕಂಡು ಪ್ರಾಮುಖ್ಯತೆ ಪಡೆದುಕೊಂಡಿದೆ, ಚಸ್ ಆಟದಲ್ಲಿ ಭಾರತದೇಶವು ಕೂಡ ಪ್ರಪಂಚವನ್ನೇ ತಿರುಗುನೋಡುವಂತೆ ಮಾಡಿದ ಕೀರ್ತಿ ಚಸ್ ಆಟಗಾರರು ತಂದಿದ್ದಾರೆ ಎಂದು ನುಡಿದರು.ಆನ್ಲೈನ್ ಮೂಲಕವು ಚೆಸ್ ತರಗತಿಗಳು ನಡೆಸಿ, ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಕೀರ್ತಿ ಸಂಪಾದಿಸಿದ ಸಂಸ್ಥೆಯಾಗಿ ಮಂಡ್ಯ ರಾಯಲ್ ಚೆಸ್ ಅಕಾಡೆಮಿ ಬೆಳೆದಿದೆ, ನಮ್ಮ ಸ್ವಂತ ಅನುಭವಕ್ಕೂ ಬಂದಿದೆ ಎಂದು ಸ್ಮರಿಸಿದರು.

ಇನ್ನು ನಾವು ಅಬಕಾರಿ ಇಲಾಖೆ ವಿಷಯಗಳನ್ನು ಅರಿಯೋಣ, ಇಂದಿನ ದಿನಗಳಲ್ಲಿ ದೊಡ್ಡ ದೊಡ್ಡ ನಗರ ಪ್ರದೇಶಗಳ ಕಾಲೇಜು ಯುವಕರಿಗೆ ಮಾದಕದ್ರವ್ಯಗಳಾದ ಡ್ರಗ್ಸ್ ಲಭಿಸುತ್ತಿದೆ, ಪೋಷಕರು ತಮ್ಮ ಯುವ ವಯಸ್ಸಿನ ಮಕ್ಕಳ ಚಲನವಲನಗಳನ್ನು ಗಮನಿಸಿ ಎಂದು ಸಲಹೆ ನೀಡಿದರು.


ಯುವಕರು ಡ್ರಗ್ಸ್ಗೆ ಅಡಿಟ್ಆದರೆ ಮತ್ತೆ ಸರಿಪಡಿಸುವುದು ಸಾಧ್ಯತೆ ಕಡಿಮೆ, ಅಡಿಟ್ಆಗದಂತೆ ನೋಡಿಕೊಳ್ಳುವುದು ಉತ್ತಮ, ಸೂಕ್ಷ ?ಮ ಮನಸ್ಸಿನ ಯುವಕರೇ ಇಂತಹ ಕೆಟ್ಟ ಚಟಗಳಿಗೆ ಜಾಸ್ತಿ ಬೀಳುವುದು ಎಂದು ಎಚ್ಚರಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವ ಪ್ರತಿಭಾವಂತರಿಗೆ ಗಣ್ಯರ ಸಮ್ಮುಖದಲ್ಲಿ ಅಭಿನಂದಿಸಲಾಯಿತು. ವಾರ್ಷಿಕ ಸಂಚಿಕೆ ಲೋಕಾರ್ಪಣೆ ಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ದಿ.ವಿಝರ್ಡ್ ಗುರು ಟ್ರಸ್ಟ್ ಕಾರ್ಯದರ್ಶಿ ಎಂ.ಎಸ್. ಚೇತನ್, ಮಹಾರಾಣಿ ಕಾಲೇಜು ದೈಹಿಕ ಶಿಕ್ಷಣ ನಿರ್ದೇಶಕ ಸಿ.ಎಸ್. ಮೋಹನ್ಕುಮಾರ್, ಮೈಸೂರಿನ ಕೆ.ಆರ್.ವಿ.ವಿ.ವಿ ರಾಜ್ಯಾಧ್ಯಕ್ಷೆ ಎಚ್.ಎಲ್.ಯಮುನಾ, ಕಾರ್ಮಲ್ಕಾನ್ವೆಂಟ್ ವ್ಯವಸ್ಥಾಪಕಿ ಸಿಸ್ಟರ್ ಗ್ಲಾಡಿಸ್, ಪ್ರಾಂಶುಪಾಲೆ ಸಿಸ್ಟರ್ ಲಲಿತಾಮೇರಿ ಮತ್ತಿತರರಿದ್ದರು.

ಮಂಡ್ಯ ನಗರದಲ್ಲಿರುವ ಗಾಂಧಿಭವನದಲ್ಲಿ ದಿ.ವಿಝರ್ಡ್ ಗುರು ಟ್ರಸ್ಟ್, ಮಂಡ್ಯ ರಾಯಲ್ ಡಿವೈಎಸ್ಪಿ ಕೆ.ಮೋಹನ್ ನೀಡಿದರು.

ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಮನವಿ



ಮಂಡ್ಯ: ಜೂನ್ ಮೂರರಂದು ನಡೆಯಲಿರುವ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮರಿತಿಬ್ಬೇಗೌಡ ಅವರನ್ನು ಅಹಿಂದ ವರ್ಗದ ಶಿಕ್ಷಕರು ಬೆಂಬಲಿಸುವಂತೆ ಮಂಡ್ಯ ಜಿಲ್ಲಾ ಕಾಂಗ್ರೆಸ್ ಸಮಿತಿ ಹಿರಿಯ ಉಪಾಧ್ಯಕ್ಷ ಎಂಎಲ್ ಸುರೇಶ್ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮರಿತಿಬ್ಬೇಗೌಡರು ನಾಲ್ಕು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಶಿಕ್ಷಕರ ಪರವಾಗಿ ಕೆಲಸವನ್ನು ಮಾಡಿದ್ದಾರೆ. ಪಕ್ಷೇತರ ಅಭ್ಯರ್ಥಿಯಾಗಿ ,ಜಾತ್ಯತೀತ ಜನತಾದಳದ ಅಭ್ಯರ್ಥಿಯಾಗಿ ಅವರು ಈ ಹಿಂದಿನ ಚುನಾವಣೆಗಳಲ್ಲಿ ಗೆಲುವು ಸಾಧಿಸಿದ್ದು ,ಈಗ ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕೆ ಇಳಿದಿದ್ದಾರೆ ಎಂದು ತಿಳಿಸಿದರು.

ವಿಧಾನ ಪರಿಷತ್ತಿನ ಒಳಗೆ ಮತ್ತು ಹೊರಗೆ ಮರಿತಿಬ್ಬೇಗೌಡರು ಶಿಕ್ಷಕರ ಪರವಾಗಿ ಹೋರಾಟ ನಡೆಸಿದ್ದಾರೆ ಎಂದು ತಿಳಿಸಿದ ಅವರು,ಹಾಗಾಗಿ ಸದಾ ಶಿಕ್ಷಕರ ಏಳಿಗೆಗಾಗಿ ಶ್ರಮಿಸುತ್ತಿರುವ ಅವರನ್ನು ಈ ಬಾರಿಯೂ ಬೆಂಬಲಿಸುವಂತೆ ಮನವಿ ಮಾಡಿದರು .

ಪ್ರಸ್ತುತ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತ ನಡೆಸುತ್ತಿದೆ. ಸಿದ್ದರಾಮಯ್ಯ ಅವರು ಉತ್ತಮವಾಗಿ ಆಡಳಿತ ನೀಡುತ್ತಿದ್ದಾರೆ. ಲೋಕಸಭಾ ಚುನಾವಣೆಯಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಸ್ಟಾರ್ ಚಂದ್ರು ಅವರ ಗೆಲುವು ನಿಶ್ಚಿತ ಎಂದು ತಿಳಿಸಿದರು. ರಾಜ್ಯ ಸರ್ಕಾರ ಶಕ್ತಿ ಯೋಜನೆ, ಉಚಿತ ವಿದ್ಯುತ್ ,ಪದವೀಧರರಿಗೆ ಮತ್ತು ಡಿಪ್ಲೋಮಾ ಪಡೆದವರಿಗೆ 3000,1500ರೂಪಾಯಿ ನಿರುದ್ಯೋಗ ಭತ್ಯೆನೀಡುತ್ತಿದೆ. ಇದು ಪಲಾನುಭವಿಗಳಿಗೆ ತಲುಪಿದ್ದು, ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ತಿಳಿಸಿದರು.

ಜೂನ್ ಮೂರರಂದು ಬುಧವಾರ ಚುನಾವಣೆ ನಡೆಯಲಿದ್ದು ,ಆದ ಕಾರಣ ಮಂಡ್ಯ ,ಹಾಸನ, ಮೈಸೂರು ,ಹಾಗು ಚಾಮರಾಜನಗರ ಜಿಲ್ಲೆಯ ಅಹಿಂದ ಮತದಾರರು ಮೊದಲ ಪ್ರಾಶಸ್ತ್ಯದ ಮತವನ್ನು ನೀಡಿ ಮರೆತಿಬ್ಬೇಗೌಡರನ್ನು ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಮಡಿವಾಳ ಸಮಾಜದ ಅಧ್ಯಕ್ಷ ಡಿ ರಮೇಶ್, ಜಿಲ್ಲಾ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗಗಳ ಘಟಕದ ಪ್ರಧಾನ ಕಾರ್ಯದರ್ಶಿ ಎಂ ಎಸ್ ರಾಜಣ್ಣ ,ನಗರಸಭೆ ಮಾಜಿ ಸದಸ್ಯ ಅಮ್ಜದ್ ಪಾಷಾ ,ಎನ್ ದೊಡ್ಡಯ್ಯ, ಸತೀಶ್, ಶ್ರೀನಿವಾಸು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಲೆ, ಸಾಂಸ್ಕೃತಿಕ ವೃದ್ಧಿಯಲ್ಲಿ ಬೇಸಿಗೆ ಶಿಬಿರಗಳ ಪಾತ್ರ ದೊಡ್ಡದು

ಕಾಯಕಯೋಗಿ ಸುದ್ದಿ

ಕೆ.ಆರ್.ಪೇಟೆ: ವಿದ್ಯಾರ್ಥಿಗಳು ಬೇಸಿಗೆ ರಜೆಯನ್ನು ವ್ಯರ್ಥ ಮಾಡದೆ ಬೇಸಿಗೆ ಶಿಬಿರಗಳಲ್ಲಿ ಭಾಗವಹಿಸಿ ಕಲೆ ಮತ್ತು ಸಾಂಸ್ಕೃತಿಕ ವಿಷಯಗಳನ್ನು ಅಧ್ಯಯನ ಮಾಡಬೇಕು. ಆ ಮೂಲಕ ನಮ್ಮ ಜಾನಪದ ಕಲೆಗಳನ್ನು ಉಳಿಸಬೇಕು ಎಂದು ರಾಜ್ಯ ಆರ್ಟಿಒ ಅಧಿಕಾರಿಗಳ ಸಂಘದ ಅಧ್ಯಕ್ಷ ಆರ್ಟಿಒ ಮಲ್ಲಿಕಾರ್ಜುನ್ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.



ತಾಲ್ಲೂಕಿನ ಅಕ್ಕಿಹೆಬ್ಬಾಳು ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿರುವ ಅಕ್ಕಿ ಹೆಬ್ಬಾಳು ರಂಗಮಂದಿರದಲ್ಲಿಲೋಕಾಯನಕಲ್ಚರಲ್ ಫೌಂಡೇಶನ್ ಆಯೋಜಿಸಿದ್ದ 14ನೇ ವರ್ಷದ ಲೋಕಾಯನ ಮಕ್ಕಳ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಕಸಾಪ ತಾಲ್ಲೂಕು ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ ಮಾತನಾಡಿ, ನಮ್ಮ ಮಂಡ್ಯ ಜಿಲ್ಲೆಯಲ್ಲಿ ಅಕ್ಕಿಹೆಬ್ಬಾಳು ಗ್ರಾಮದಲ್ಲಿರುವಈರಂಗಮಂದಿರದ ಉಪಯೋಗವನ್ನು ಎಲ್ಲರೂ ಪಡೆದುಕೊಂಡು ನಮ್ಮ ಗ್ರಾಮೀಣ ಕಲೆಗಳನ್ನು ಕಲಿತು ಗ್ರಾಮೀಣ ಕಲೆಗಳನ್ನು ಉಳಿಸಬೇಕು. ಅಕ್ಕಿಹೆಬ್ಬಾಳು ಗ್ರಾಮದಲ್ಲಿರುವ ರಂಗಮಂದಿರದ ಉಪಯೋಗ ಮಾಡಿಕೊಳ್ಳಬೇಕು ಎಂದು ಅವರುಹೇಳಿದರು.ವೇದಿಕೆಕಾರ್ಯಕ್ರಮದ ನಂತರ ರಂಗೀಲಾಲನ ನಿಲುವಂಗಿ ಮತ್ತು ಹ್ಯಾಪಿ ಬರ್ತೇ ಟು ಯು ಎಂಬ ನಾಟಕವನ್ನು ವಿದ್ಯಾರ್ಥಿಗಳು ಪ್ರದರ್ಶನ ಮಾಡಿದರು. ಸಾಮೂಹಿಕ ಗಾಯನ ನಡೆಯಿತು.ಲೋಕಾಯನ ಸಂಸ್ಥೆಯ ಮುಖ್ಯಸ್ಥ ಶಶಿಧರ್ ಭಾರಿಘಾಟ್, ಸಿನಿಮಾ ನಿರ್ದೇಶಕ ಉಮಾಶಂಕರ್, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಆರ್.ವಾಸು, ಮುಖ್ಯಶಿಕ್ಷಕ ಅಮಿತ್, ಯುವ ಸಾಹಿತಿ ಮೊಹಮ್ಮದ್ ಅಜರುದ್ದೀನ್ ಮತ್ತಿತರರು ಭಾಗವಹಿಸಿದ್ದರು.

ವಿದ್ಯುತ್ ಸ್ಪರ್ಶ: ರೈತ ಸಾವು



ಕಾಯಕಯೋಗಿ ಸುದ್ದಿ

ಕೆ ಆರ್ ಪೇಟೆ: ತಾಲ್ಲೂಕಿನ ಸಂತೇಬಾಚಹಳ್ಳಿ ಹೋಬಳಿಯ ಬೆಡದಹಳ್ಳಿ ಗ್ರಾಮದಲ್ಲಿ ವಿದ್ಯುತ್ ತಂತಿ ತುಳಿದು ವಿದ್ಯುತ್ ಸ್ಪರ್ಶಿಸಿ ರೈತ ಸಾವನಪ್ಪಿರುವ ಘಟನೆ ಬೆಡದಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸಂತೇಬಾಚಹಳ್ಳಿ ಹೋಬಳಿಯ ಬೆಡದಹಳ್ಳಿ ಗ್ರಾಮದ ಸರ್ವೇ ನಂಬರ್ 288 ರ ಜಮೀನಿನಲ್ಲಿ ಕೆಲಸ ಮಾಡುತಿದ್ದ ಸಂದರ್ಭದಲ್ಲಿ ಸಿಂಗನಹಳ್ಳಿ ಗ್ರಾಮದ ಶಿವೇಗೌಡ (60) ವಿದ್ಯುತ್ ತಂತಿ ತುಂಡಾಗಿ ಬಿದ್ದುದ್ದನ್ನು ತುಳಿದು ವಿದ್ಯುತ್ ಪ್ರವಹಿಸಿ ಸ್ಥಳದಲ್ಲೇ ಸಾವಿಗೀಡಾಗಿದ್ದಾರೆ.ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.ವಿದ್ಯುತ್ ಇಲಾಖೆಯಿಂದ ಕುಟುಂಬಸ್ಥರಿಗೆ ಪರಿಹಾರ ನೀಡುವಂತೆ ರೈತರು ಒತ್ತಾಯಿಸಿದ್ದಾರೆ. ಸ್ಥಳಕ್ಕೆ ಕಿಕ್ಕೇರಿ ಇನ್ಸ್ಪೆಕ್ಟರ್ ರೇವತಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

ಗ್ರಾಂ. ಪಂ. ಅಧ್ಯಕ್ಷ ಕುಬೇರ, ಸದಸ್ಯ ಬೆಡದಹಳ್ಳಿ ಸುನಿಲ್,ಕಾಂತರಾಜು, ಸೇರಿ ರೈತರು ಇದ್ದರು.

ಅಕ್ರಮ ಗಣಿಗಾರಿಕೆ ಸ್ಥಗಿತಗೊಳಿಸುವಂತೆ ಆಗ್ರಹ

ಕಾಯಕಯೋಗಿ ಸುದ್ದಿ

ನಾಗಮಂಗಲ: ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಯನ್ನು ಸ್ಥಗಿತಗ

ಕಂದಾಯ ಸೇವೆಗಳ ವಿಶೇಷ ಆಂದೋಲನ ಯಶಸ್ವಿ

ಮೈಸೂರು: ಮೈಸೂರು ಜಿಲ್ಲಾಡಳಿತದ ವತಿಯಿಂದ ಮೈಸೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ರೈತರಿಗೆ ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಮೇ.13 ರಿಂದ 27 ರವರೆಗೆ 15 ದಿನಗಳ ಕಾಲ ಕಂದಾಯ ಇಲಾಖೆಯ ವಿವಿಧ ಅವಶ್ಯಕ ಸೇವೆಗಳನ್ನು ತ್ವರಿತಗತಿಯಲ್ಲಿ ತಲುಪಿಸಲು "ಕಂದಾಯ ಸೇವೆಗಳ ವಿಶೇಷ ಆಂದೋಲನ" ವನ್ನು ಆಯೋಜಿಸಲಾಗಿತ್ತು.

ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿನ 9 ತಾಲ್ಲೂಕುಗಳಲ್ಲಿ ಸದರಿ ಆಂದೋಲನವು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ರೈತರಿಗೆ ಮತ್ತು ಸಾರ್ವಜನಿಕರಿಗೆ ಸಾಕಷ್ಟು ರೀತಿಯಲ್ಲಿ ಇದರಿಂದ ಅನುಕೂಲ ಆಗಿರುತ್ತದೆ. ಆರ್‌ಟಿಸಿ–ಆಧಾರ್ ಸೀಡಿಂಗ್ 2,20,529, ಲ್ಯಾಂಡ್ ಬೀಟ್ 7,933, ಫ್ರೂಟ್ಸ್ ಐಡಿ 6,528, ಬರ ಪರಿಹಾರ 3,337, ಬಗರ್ ಹುಕುಂ 1,897 ಇವುಗಳ ಜೊತೆಗೆ ಕಂದಾಯ ಗ್ರಾಮಗಳ ರಚನೆ, ಪೌತಿ ಖಾತೆ ಅರ್ಜಿ ಸ್ವೀಕಾರ, ಸಕಾಲ ಅರ್ಜಿಗಳ ವಿಲೇವಾರಿ, ಅಭಿಲೇಖಾಲಯ ದಾಖಲೆಗಳ ಗಣಕೀಕರಣ ಮುಂತಾದ ಹಲವಾರು ಸೇವೆಗಳನ್ನು ಸಹ ಕೈಗೊಳ್ಳಲಾಗಿರುತ್ತದೆ. ಈ ಸೇವೆಗಳ ಜೊತೆಗೆ ಕಂದಾಯ ಗ್ರಾಮಗಳ ರಚನೆ, ಪೌತಿ ಖಾತೆ ಅರ್ಜಿ ಸ್ವೀಕಾರ, ಸಕಾಲ ಅರ್ಜಿಗಳ ವಿಲೇವಾರಿ, ಅಭಿಲೇಖಾಲಯ ದಾಖಲೆಗಳ ಗಣಕೀಕರಣ ಮುಂತಾದ ಹಲವಾರು ಸೇವೆಗಳನ್ನು ಸಹ ಕೈಗೊಳ್ಳಲಾಗಿರುತ್ತದೆ.

ವಿವಿಧ ಗ್ರಾ.ಪಂ.ಗಳಿಗೆ ಜಿಲ್ಲಾ ಪಂಚಾಯತ್‌ನ ಸಿಇಒ ಭೇಟಿ

ಮೈಸೂರು: ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲ್ಲೂಕು ವ್ಯಾಪ್ತಿಯ ವಿವಿಧ ಗ್ರಾಮ ಪಂಚಾಯತಿಗಳಿಗೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕೆ.ಎಂ ಗಾಯಿತ್ರಿ ಅವರು ಭೇಟಿ ನೀಡಿ, ಕುಡಿಯುವ ನೀರಿನ ಸ್ಥಾವರಗಳನ್ನು ಸುಸ್ಥಿತಿಯಲ್ಲಿಡುವುದು ಮತ್ತು ನೈರ್ಮಲೀಕರಣದ ಕುರಿತಾಗಿ ಗ್ರಾಮ ಪಂಚಾಯತ್ ಮಟ್ಟದಲ್ಲಿ ಮಳೆಗಾಲದ ಮುಂಚಿತವಾಗಿ ಕೈಗೊಳ್ಳಬೇಕಾಗಿರುವ ಮುನ್ನೆಚ್ಚರಿಗೆ ಕ್ರಮಗಳ ಬಗ್ಗೆ ತಿಳಿಸಿದರು.

ಈ ಸಂದರ್ಭದಲ್ಲಿ ಟಿ.ನರಸೀಪುರ ತಾಲ್ಲೂಕಿನ ಸೋಸಲೆ, ಬೆನಕನಹಳ್ಳಿ, ದೊಡ್ಡಬಾಗಿಲು, ಕೊಲತ್ತೂರು, ಚಿದರವಳ್ಳಿ ಮತ್ತು ಉಕ್ಕಲಗೆರೆ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿದರು. ಮಳೆಗಾಲ ಸಮೀಪಿಸುತ್ತಿರುವುದರಿಂದ ಮಳೆಗಾಲದ ಮುಂಚಿತವಾಗಿ ಜಾಗೃತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವ ಸಂಬಂಧ ಗ್ರಾಮ ಪಂಚಾಯತಿಗಳ ವ್ಯಾಪ್ತಿಗೆ ಬರುವ ಉಪ–ಗ್ರಾಮ ಅಥವಾ ಜನವಸತಿಗಳಿಗೆ ಭೇಟಿ ನೀಡಿ ಕುಡಿಯುವ ನೀರು ಸರಬರಾಜಿಗೆ ಸಂಬಂಧಿಸಿದ ಕುಡಿಯುವ ನೀರು ಸ್ಥಾವರಗಳನ್ನು ಪರಿವೀಕ್ಷಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ(ಆಡಳಿತ)ಗಳಾದ ನಾಗರಾಜ್, ಮೈಸೂರು ವಿಭಾಗದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ರಂಜಿತ್ ಕುಮಾರ್, ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.



ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತಿರುವ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ನೀರಿನ ಗುಣಮಟ್ಟದ ಪರೀಕ್ಷೆಗಳ ಸೂಕ್ತ ಕ್ರಮಗಳನ್ನು ತಾಲ್ಲೂಕಿನ 46 ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ನಿಯಮಾನುಸಾರ ಕೈಗೊಳ್ಳಬೇಕು ಎಂದು ಗ್ರಾಮ ಪಂಚಾಯತಿಗಳಿಗೆ ಕಾರ್ಯನಿರ್ವಾಹಕಾಧಿಕಾರಿಗಳಾದ ಜೆರಾಲ್ಡ್ ರಾಜೇಶ್ ರವರು ಸೂಚಿಸಿದರು.

ನಗರದಲ್ಲಿ ರಾಷ್ಟ್ರ ಸೇವಿಕಾ ಸಮಿತಿ ಹೊಯ್ಸಳ ಪ್ರಾಂತ ವಿಶೇಷ ವರ್ಗ

ಕಾಯಕಯೋಗಿ ಸುದ್ದಿ

ಮೈಸೂರು: ರಾಷ್ಟ್ರ ಸೇವಿಕಾ ಸಮಿತಿ, ಹೊಯ್ಸಳ ಪ್ರಾಂತದ ವತಿಯಿಂದ ಹೆಣ್ಣು ಮಕ್ಕಳಿಗಾಗಿ ಹದಿನೈದು ದಿನಗಳು ಆಯೋಜಿಸಲಾಗಿದ್ದ ವಿಶೇಷ ವರ್ಗ, ಪ್ರವೇಶ, ಹಾಗೂ ಪ್ರಬೋಧ ಶಿಕ್ಷಾ ವರ್ಗ ಮೈಸೂರಿನ ಶ್ರೀನಗರದಲ್ಲಿರುವ ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದಲ್ಲಿಇತ್ತೀಚೆಗೆ ನಡೆಯಿತು.

ಅಖಿಲ ಭಾರತ ಮಹಿಳಾ ಸಂಘಟನೆಯಾದ ರಾಷ್ಟ್ರ ಸೇವಿಕಾ ಸಮಿತಿಯು ವಿಶ್ವದ ಬೃಹತ್ ಸಂಘಟನೆಯಾಗಿದೆ. ವಂದನೀಯ ಲಕ್ಷ್ಮೀಬಾಯಿ ಕೇಳ್ಕರ್ ರವರು (ವಂ. ಮೌಶಿಜೀ) ಹಿಂದೂ ಮಹಿಳೆಯರನ್ನುಸಂಘಟಿಸಿ ಅವರನ್ನುಸಶಕ್ತಗೊಳಿಸಿ ತನ್ಮೂಲಕ ಭಾರತವನ್ನು ತೇಜಸ್ವಿ ರಾಷ್ಟ್ರವನ್ನಾಗಿ ಮಾಡುವ ಧ್ಯೇಯದಿಂದ ರಾಷ್ಟ್ರ ಸೇವಿಕಾ ಸಮಿತಿಯನ್ನು 1936 ರ ವಿಜಯದಶಮಿಯಂದು ಮಹಾರಾಷ್ಟ್ರದ ನಾಗಪುರದ ಬಳಿಯಿರುವ ವಾರ್ಧಾ ಎಂಬಲ್ಲಿ ಪ್ರಾರಂಭಿಸಿದರು.

ಹೆಣ್ಣು ಮಕ್ಕಳಲ್ಲಿ ಸ್ವಸಂರಕ್ಷಣಾ ಕ್ಷಮತೆಯನ್ನು ಬೆಳೆಸುವುದರ ಜೊತೆಗೆ, ಶಾರೀರಿಕ ದೃಢತೆ, ಮಾನಸಿಕ ಬಲ, ಬೌದ್ಧಿಕ ಸಾಮರ್ಥ್ಯವನ್ನು ಹೆಚ್ಚಿಸುವುದು, ಕೌಟುಂಬಿಕ ಜವಾಬ್ದಾರಿಯ ಜೊತೆಗೆ ರಾಷ್ಟ್ರೀಯ ಜವಾಬ್ದಾರಿಗಳ ಕುರಿತು ಮಹಿಳೆಯರು ಜಾಗೃತರಾಗಿರುವಂತೆ ಮಾಡುವುದು ಸಮಿತಿಯ ಉದ್ದೇಶವಾಗಿದೆ. ಈ ಎಲ್ಲಾ ಕಾರ್ಯಗಳಿಗೆ ಕಾರ್ಯಕರ್ತೆಯರನ್ನು ನಿರ್ಮಾಣ ಮಾಡಲು ಸಮಿತಿಯು ಪ್ರಾರಂಭಿಕ, ಪ್ರವೇಶ , ಪ್ರಬೋಧ , ಪ್ರವೀಣ ಎಂಬ ನಾಲ್ಕು ಹಂತದ ಶಿಕ್ಷಣವನ್ನು ನೀಡುವುದಕ್ಕೆ ಅತ್ಯಂತ ಆದ್ಯತೆಯನ್ನು ನೀಡುತ್ತದೆ

ಕಾರ್ಯಕ್ರಮದ ಉದ್ಘಾಟನಾ ಕಾರ್ಯಕ್ರಮದಲ್ಲಿ ಶ್ರೀನಗರದ ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದ ಪ್ರಾಂಶುಪಾಲರಾದ ಶ್ರೀಮತಿ ಅನಿತಾರವರು ಮಾತನಾಡುತ್ತಾ ಸಮಿತಿಯ ವರ್ಗಗಳು ಶಿಸ್ತುಬದ್ಧವಾಗಿ ನಡೆಯುತ್ತಿರುವುದು ತುಂಬಾ ಸಂತೋಷದಾಯಕ, ಶಿಕ್ಷಾರ್ಥಿಗಳು ಈ ವರ್ಗಗಳಿಂದ ಸ್ಫೂರ್ತಿ ಪಡೆದು ರಾಷ್ಟ್ರ ಕಾರ್ಯದಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದು ತಿಳಿಸಿದರು.



ಹೊಯ್ಸಳ ಪ್ರಾಂತ ಕಾರ್ಯವಾಹಿಕಾ ಹಾಗೂ ಪ್ರಬೋಧ್ ವರ್ಗಾಧಿಕಾರಿ ಮಾನನೀಯ ವಸಂತಾ ಸ್ವಾಮಿ ಅವರು ಮಾತನಾಡುತ್ತಾ ವರ್ಗದಲ್ಲಿ ಒಟ್ಟು 15 ದಿನಗಳ ತರಬೇತಿ ನಡೆಯಲಿದೆ, ವಿಶೇಷ ವರ್ಗ, ಪ್ರವೇಶ ಹಾಗೂ ಪ್ರಬೋಧ ಶಿಕ್ಷಾ ವರ್ಗಗಳಲ್ಲಿ ತರುಣಿಯರು ಹಾಗೂ ಮಾತೆಯರು ಯೋಜಿತ ಮತ್ತು ಅನುಶಾಸಿತ ರೀತಿಯಲ್ಲಿ ಶಿಕ್ಷಣ ಪಡೆಯುತ್ತಾರೆ ಎಂದು ವರ್ಗಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಾಂತ ಸಹ ಕಾರ್ಯವಾಹಿಕಾ ಹಾಗೂ ಪ್ರಬೋಧ ವರ್ಗಾಧಿಕಾರಿ ಮಾನನೀಯ ಪೂರ್ಣಿಮಾ ರವಿಶಂಕರ್, ವಿಶೇಷ ವರ್ಗಾಧಿಕಾರಿ ಮಾನನೀಯ ಸುನಿತಾ, ಪ್ರಾಂತ ಶಾರೀರಿಕ ಪ್ರಮುಖ್ ಮಾನನೀಯ ಶಿಲ್ಪಾ ಭಾರ್ಗವ, ಪ್ರಾಂತ ಕಾರ್ಯಾಲಯ ಪ್ರಮುಖ್ ಮಾನನೀಯ ಅರುಣಾ ಪುರೋಹಿತ್ , ಪ್ರಾಂತ ತರುಣಿ ಪ್ರಮುಖ್ ಮಾನನೀಯ ಸುಮಂಗಲಾ ಬಾಪಟ್ ಹಾಗೂ ಪ್ರಾಂತ ಪ್ರಚಾರ ಪ್ರಮುಖ್ ಮಾನನೀಯ ಮಯೂರಲಕ್ಷ್ಮೀ ಉಪಸ್ಥಿತರಿದ್ದರು.

ವರ್ಗದ ಸಂದರ್ಭದಲ್ಲಿ ರಾ. ಸ್ವ. ಸೇ. ಸಂಘದ ಕ್ಷೇತ್ರ ಕಾರ್ಯಕಾರಿಣಿ ಸದಸ್ಯರಾದ ಶ್ರೀ ವೀ. ನಾಗರಾಜ್ , ವಕೀಲರಾದ ಶ್ರೀಮತಿ ಕ್ಷಮಾ ನರಗುಂದ್, ಆರೋಗ್ಯ ಭಾರತೀಯ ಪ್ರಾಂತ ಕಾರ್ಯದರ್ಶಿಗಳಾದ ಡಾಕ್ಟರ್ ಏ. ಎಸ್. ಚಂದ್ರಶೇಖರ್ ಮುಂತಾದ ಹಿರಿಯರು ಮಾರ್ಗದರ್ಶನ ನೀಡಿದರು.

8 ದಿನಗಳ ವಿಶೇಷ ವರ್ಗ ಹಾಗೂ ಪ್ರವೇಶ, ಪ್ರಬೋಧ ವರ್ಗಗಳು ಸಂಪನ್ನವಾದ ನಂತರ ನಗರದ ಜೆ.ಪಿ. ನಗರದ ಪುಟ್ಟರಾಜು ಗವಾಯಿ ಕ್ರೀಡಾಂಗಣದಲ್ಲಿ ಶಿಕ್ಷಾರ್ಥಿಗಳಿಂದ ಪಥಸಂಚಲನ ನಡೆಯಿತು.

ಹೊಯ್ಸಳ ಪ್ರಾಂತದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಕಾರ್ಯಕರ್ತೆಯರು ಮತ್ತು ಹಲವಾರು ಸೇವಿಕಾ ಭಗಿನಿಯರು ಪಥಸಂಚಲನದಲ್ಲಿ ಪಾಲ್ಗೊಂಡರು.

ಭಗವಾಧ್ವಜಕ್ಕೆ ಪುಷ್ಪಾರ್ಚನೆ ನೆರವೇರಿಸಿದ ನಂತರ ಜೆ.ಪಿ. ನಗರದ ವಿವಿಧ ರಸ್ತೆಗಳಲ್ಲಿ ಗಣವೇಷದಾರಿ ಸೇವಿಕೆಯರ ಘೋಷ್ ವಾದನದೊಂದಿಗೆ ಶಿಸ್ತುಬದ್ಧ ಸಂಚಲನ ನಡೆಯಿತು.

ಈ ಶಕ್ತಿ ಸಮಾಜಕ್ಕೆ, ದೇಶಕ್ಕೆ ಹಾಗು ಸನಾತನ ಧರ್ಮಕ್ಕೆ ದೊರೆತರಲ್ಲಿ ನಮ್ಮ ಸನಾತನ ಧರ್ಮ ಉಳಿಯುವುದು.

ಸೀತೆ, ಝಾನ್ಸಿ ರಾಣಿ, ಅಹಲ್ಯಾ ಬಾಯಿ ಹೋಳ್ಕರ್, ಭಗಿನಿ ನಿವೇದಿತಾ, ರಾಣಿ ಚನ್ನಮ್ಮ, ರಾಣಿ ಅಬ್ಬಕ್ಕ ಮುಂತಾದವರು ಧರ್ಮ ರಕ್ಷಣೆಗಾಗಿ ಶ್ರಮಿಸಿದರು. ಅವರ ನೇತೃತ್ವ, ಕರ್ತೃತ್ವ ಮತ್ತು ಮಾತೃತ್ವ ನಮಗೆ ಆದರ್ಶವಾಗಬೇಕು. ಸಮಿತಿಯ ಶಿಕ್ಷಾ ವರ್ಗದಲ್ಲಿ ಪಡೆದ ಶಿಕ್ಷಣದಿಂದ ಸ್ಫೂರ್ತಿ ಪಡೆದು ನಾವೆಲ್ಲರೂ ನಮ್ಮ ಕ್ಷೇತ್ರವನ್ನು ಹೆಚ್ಚು ಕಾರ್ಯಶೀಲಗೊಳಿಸಬೇಕು ಎಂದು ತಿಳಿಸಿದರು.

ಪ್ರಬೋಧ್ ವರ್ಗಾಧಿಕಾರಿ ಮಾ. ವಸಂತಾ ಸ್ವಾಮಿಯವರು ಪ್ರಬೋಧ್ ವರ್ಗದ ವರದಿ ಹಾಗೂ ಪ್ರವೇಶ ವರ್ಗಾಧಿಕಾರಿ ಮಾ. ಪೂರ್ಣಿಮಾ ರವಿಶಂಕರ್ ಪ್ರವೇಶ ವರ್ಗದ ವರದಿ ನೀಡಿದರು.

ಸಮಾರೋಪದಲ್ಲಿ ಶಿಕ್ಷಾರ್ಥಿಗಳಿಂದ ಘೋಷ್ ವಾದನ, ಸೂರ್ಯ ನಮಸ್ಕಾರ, ಯೋಗಾಸನ , ದಂಡ, ಯಷ್ಟಿ , ನಿಯುದ್ಧ, ಯೋಗಫಾಪ್ ಹಾಗೂ ವ್ಯಾಯಾಮಗಳ ಪ್ರಾತ್ಯಕ್ಷಿಕೆ ನಡೆಯಿತು.

ಮೈಸೂರು ಜಿಲ್ಲಾ ಕಾರ್ಯವಾಹಿಕಾ ಶ್ರೀಮತಿ ಗೀತಾ ಶ್ರೀಹರಿ ವಂದನಾರ್ಪಣೆ ಮಾಡಿದರು.

ಬಾಹುಬಲಿ ಆಸ್ಪತ್ರೆಯಲ್ಲಿ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಘಟಕ ಪ್ರಾರಂಭ



ಕಾಯಕಯೋಗಿ ಸುದ್ದಿ

ಶ್ರವಣಬೆಳಗೊಳ: ಕರ್ಮಯೋಗಿ ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿಯವರ ದೂರದೃಷ್ಟಿಯಿಂದ 2006 ರಲ್ಲಿ ಮಕ್ಕಳ ಆರೋಗ್ಯ ಸೇವೆಗಾಗಿ ಆರಂಭಗೊಂಡ ಬಾಹುಬಲಿ ಆಸ್ಪತ್ರೆಯು ಈ ಭಾಗದ ಜನರಿಗೆ ಆಶಾಕಿರಣವಾಗಿದ್ದು, ಉತ್ತಮ ಆರೋಗ್ಯ ಸೇವೆ ಒದಗಿಸುತ್ತಿದೆ ಎಂದು ಅಖಿಲ ಕರ್ನಾಟಕ ಜೈನ ಮಹಿಳಾ ಒಕ್ಕೂಟದ ಅಧ್ಯಕ್ಷೆ ಪದ್ಮಿನಿ ಪದ್ಮರಾಜ್ ಹೇಳಿದರು.

ಇಲ್ಲಿನ ಶ್ರೀ ಧವಲತೀರ್ಥಂನಲ್ಲಿರುವ ಶ್ರೀ ಬಾಹುಬಲಿ ಆಸ್ಪತ್ರೆಯಲ್ಲಿ ಶುಕ್ರವಾರ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಘಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶ್ರೀಮಠದ ಪೀಠಾಧ್ಯಕ್ಷರಾದ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿಯವರು ಕಡಿಮೆ ಅವಧಿಯಲ್ಲಿ ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಅಪಾರವಾದ ಸೇವಾ ಕಾರ್ಯಗಳನ್ನು ಆರಂಭಿಸುತ್ತಿದ್ದು, ಅವರ ಸಾಮಾಜಿಕ ಕೈಂಕರ್ಯಕ್ಕೆ ನಾವೆಲ್ಲರೂ ಕೈಜೋಡಿಸಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿದ್ದ ಶ್ರವಣಬೆಳಗೊಳ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಬಿ.ಆರ್.ಯುವರಾಜ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷ ಎಸ್. ಆರ್.ಲೋಕೇಶ್, ಸದಸ್ಯರಾದ ಯಶಸ್ ಜೈನ್, ಶಾಲಿನಿ ದೇವೇಂದ್ರಕುಮಾರ್, ಶ್ರೀ ಬಾಹುಬಲಿ ಆಸ್ಪತ್ರೆ ಆಡಳಿತ ಮಂಡಳಿಯ ಅಧ್ಯಕ್ಷ ಡಾ. ರತ್ನರಾಜು, ತುಮಕೂರಿನ ಉದ್ಯಮಿ ಆರ್.ಎ.ಸುರೇಶ್ ಕುಮಾರ್, ಕೂಷ್ಮಾಂ ಮಹಿಳಾ ಸಮಾಜದ ಅಧ್ಯಕ್ಷೆ ಮಹಾಲಕ್ಷ್ಮಿ , ಶ್ರುತಕೇವಲಿ ಈಜುಕೇಶನ್ ಟ್ರಸ್ಟ್ ನ ಮ್ಯಾನೇಜಿಂಗ್ ಟ್ರಸ್ಟಿ ಪುಟ್ಟರಾಜು, ಎಸ್.ಎಸ್.ಡಿ.ಜೆ. ಜೆ.ಪಿ. ಸಂಘದ ಕಾರ್ಯದರ್ಶಿ ಬಬನ್ ಪಾರಿಸ ದತವಾಡೆ, ಡಾ. ರಾಮಚಂದ್ರ, ಡಾ. ಪೂರ್ಣಿಮಾ ಮುಂತಾದವರಿದ್ದರು.

ಕಾಣೆಯಾದ ಬಾಲಕನ ಪತ್ತೆಗೆ ಮನವಿ



ಮೈಸೂರು: ಜಯಪುರ ಹೋಬಳಿಯ ಹಾರೋಹಳ್ಳಿ ಗ್ರಾಮದ ಸುಮಾರು 14 ವರ್ಷದ ಚರಿತ್.ಸಿ ಎಂಬ ಬಾಲಕ ಮೇ.25 ರಂದು ಕಾಣೆಯಾಗಿದ್ದು, ಮೈಸೂರು ದಕ್ಷಿಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಹರೆ: ಕಾಣೆಯಾದ ಬಾಲಕನಿಗೆ ಸುಮಾರು 14 ವರ್ಷ ವಯಸ್ಸಾಗಿದ್ದು, 4 ಅಡಿ ಎತ್ತರ, ಎಣ್ಣೆ ಕೆಂಪು ಬಣ್ಣವನ್ನು ಹೊಂದಿರುತ್ತಾನೆ. ಬಲಪಕ್ಕೆಯಲ್ಲಿ ಆಪರೇಷನ್ ಆಗಿರುವ ಗುರುತು ಇದ್ದು, ಕನ್ನಡ ಭಾಷೆಯನ್ನು ಬಲ್ಲವರಾಗಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಕೆಂಪು ಮತ್ತು ನೀಲಿ ಮಿಶ್ರಿತ ಟಿ–ಶರ್ಟ್, ಆಫ್ ಗ್ರೇ ಕಲರ್ ಚಡ್ಡಿ ಹಾಗೂ ಗ್ರೇ ಕಲರ್ ಶೂ ಅನ್ನು ಧರಿಸಿರುತ್ತಾನೆ.

ಕಾಣೆಯಾದ ಹುಡುಗನ ಬಗ್ಗೆ ಮಾಹಿತಿ ದೊರೆತಲ್ಲಿ ಎಸ್.ಪಿ ದೂ.ಸಂ: 2520040, ಮೈಸೂರು ಜಿಲ್ಲಾ ಕಂಟ್ರೋಲ್ ರೂಂ.ನಂ:2444800, ಮೈಸೂರು ಸೌತ್ ಪೊಲೀಸ್ ಠಾಣೆಯ ದೂ.ಸಂ:0821–2444955ನ್ನು ಸಂಪರ್ಕಿಸಬಹುದು ಎಂದು ಮೈಸೂರು ದಕ್ಷಿಣ ಪೊಲೀಸ್ ಠಾಣೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ.31 ರಂದು ಉಪನ್ಯಾಸ ಕಾರ್ಯಕ್ರಮ

ಮೈಸೂರು: ಮೇ 31 ರಂದು ಬೆಳಗ್ಗೆ 11 ಗಂಟೆಗೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದಲ್ಲಿರುವ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆಯ ಆಯುಕ್ತರ ಕಚೇರಿಯ ಆವರಣದಲ್ಲಿ "ಪೂರ್ವ ಮತ್ತು ಪ್ರಾಗಿತಿಹಾಸ" ವಿಷಯವನ್ನು ಕುರಿತು, ತುಮಕೂರಿನ ಸ್ಟಡೀಸ್ ಅಂಡ್ ರಿಸರ್ಚ್ ಇನ್ ಹಿಸ್ಟರಿ ಅಂಡ್ ಆರ್ಕಿಯಾಲಜಿಯ ಸಹಾಯಕ ಪ್ರಧ್ಯಾಪಕರಾದ ಡಾ. ಪ್ರಿಯಾ ತುಮಕೂರ್ ಅವರು ಉಪನ್ಯಾಸ ನೀಡಲಿದ್ದು, ಆಸಕ್ತ ವಿದ್ಯಾರ್ಥಿಗಳು, ಇತಿಹಾಸಕಾರರು ಹಾಗೂ ಸಾರ್ವಜನಿಕರು ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಥಮ ದರ್ಜೆ ಸಹಾಯಕರಾದ ಶಶಿಧರ್ ಅವರ ದೂ.ಸಂ. 7349057976 ಅನ್ನು ಸಂಪರ್ಕಿಸಬಹುದು ಎಂದು ಪುರಾತತ್ವ, ಸಂಗ್ರಹಗಳು ಮತ್ತು ಪರಂಪರೆಯ ಉಪ ನಿರ್ದೇಶಕರು(ಪರಂಪರೆ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಂಜನಗೂಡಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭ

ಕಾಯಕಯೋಗಿ ಸುದ್ದಿ

ನಂಜನಗೂಡು: ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2023–24 ನೇ ಸಾಲಿನ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೇಂಜರ್ಸ್ ಮತ್ತು ರೋವರ್ಸ್, ಯುವ ರೆಡ್ ಕ್ರಾಸ್ ಹಾಗೂ ಇತರೆ ಸಮಿತಿಗಳ ಸಮಾರೋಪ ಸಮಾರಂಭವನ್ನು ನಿವೃತ್ತ ಪ್ರಾಚ್ಯ ವಸ್ತು ಸಂಶೋಧನಾಲಯ ಮೈಸೂರು ವಿಶ್ವವಿದ್ಯಾನಿಲಯದ ನಿರ್ದೇಶಕ ಡಾ.ಶಿವರಾಜಪ್ಪ ಉದ್ಘಾಟನೆ ಮಾಡಿದರು.



ಬಳಿಕ ಮಾತನಾಡಿದ ಅವರು, ಪಠ್ಯದ ಜೊತೆಗೆ ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳಿಗೆಹೆಚ್ಚುಒತ್ತುನೀಡಬೇಕು. ಮಾನಸಿಕ ಆರೋಗ್ಯ ಜತೆಗೆ ರಾಷ್ಟ್ರೀಯ ಅಂತಾ ರಾಷ್ಟ್ರೀಯಮಟ್ಟದಲ್ಲಿ ಸಾಧನೆ ಮಾಡಬಹುದಾದ ಅವಕಾಶಗಳು ದೊರೆಯುತ್ತದೆ. ವಿದ್ಯಾರ್ಥಿ ಜೀವನದಲ್ಲಿ ತುಂಟಾಟ ಸಹಜ. ತುಂಟಾಟದೊಂದಿಗೆ ಉತ್ತಮ ಭವಿಷ್ಯ ರೂಪಿಸಿ ಕೊಳ್ಳಿವ ಕಡೆ ಪ್ರತಿಯೊಬ್ಬರೂ ಗಮನಹರಿಸುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ವಿದ್ಯಾರ್ಥಿಗಳಿಗೆ ಸಂಯಮ ಬೆಳೆಯುವುದರ ಜತೆಗೆ ಸದೃಢ ಆರೋಗ್ಯ ವದ್ಧಿಸಲು ಸಹಕಾರಿ.ಅಲ್ಲದೇ ಭವಿಷ್ಯದಲ್ಲಿ ಸಮಾಜದಲ್ಲಿ ಒಬ್ಬ ಉತ್ತಮ ಪ್ರಜೆಯಾಗಿ ರೂಪುಗೊಳ್ಳಲು ಸಹಕಾರಿ ಎಂದರು.

ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳು ಮತ್ತು ಉಪನ್ಯಾಸಕರಿಗೆ ಬಹುಮಾನಗಳನ್ನು ನೀಡಲಾಯಿತು.

ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ರೇಣುಕಾ ಬಾಯಿ ಸಮ

ಕಾಯಕಯೋಗಿ

29-05-2024
ಬುಧವಾರ

ರಾತ್ರಿ ಸುರಿದ ಬಾರಿ ಮಳೆಗೆ ಧರೆಗುರುಳಿದ ಮರ

ಯಳಂದೂರು: ರಾತ್ರಿ ಸುರಿದ ಬಾರಿ ಮಳೆಗೆ ರಸ್ತೆಯ ಪಕ್ಕದಲ್ಲಿದ್ದ ಬಾರಿಗಾತ್ರದ ಮರವೊಂದು ಧರೆಗುರುಳಿದ ಘಟನೆ ಕಂಡುಬಂದಿದೆ. ತಾಲೂಕಿನ ಕೃಷ್ಣಪುರ ಗ್ರಾಮದಲ್ಲಿ ಬಿಳಿಗಿರಿರಂಗನಬೆಟ್ಟದ ಮುಖ್ಯ ರಸ್ತೆಯಂಚಿನಲ್ಲಿದ್ದ ಮರವು ರಾತ್ರಿಪೂರ್ತಿ ಸುರಿದ ಮಳೆಯಿಂದಾಗಿ ರಸ್ತೆಯ ಮೇಲೆ ಬಿದ್ದು ಮುಂಜಾನೆಯವರೆಗು ರಸ್ತೆ ಸಂಪೂರ್ಣ ಬಂದ್ ಆಗಿದ್ದ ಘಟನೆ ನಡೆದಿದೆ. ಅದೃಷ್ಟವಶಾತ್ ಯಾವುದೇ ಅವಘಡ ಸಂಭವಿಸಿಲ್ಲ. ಮುಂಜಾನೆ ಕೃಷ್ಣಪುರ ಗ್ರಾಮಸ್ಥರೆಲ್ಲ ಸೇರಿ ಮರವನ್ನು ಕತ್ತರಿಸಿ ತೆರವುಗೊಳಿಸಿ ಸಾರ್ವಜನಿಕರು ಓಡಾಡಲು ಅನುವು ಮಾಡಿಕೊಟ್ಟರು.



ಕೆಜೆಪಿ ಅಭ್ಯರ್ಥಿ ಎಂ.ನಾಗೇಂದ್ರ ಬಾಬು ಗೆಲ್ಲಿಸಲು ಕದಂಬ ನಾ. ಅಂಬರೀಶ್ ಮನವಿ

ಗುಂಡ್ಲುಪೇಟೆ: ಕ್ಷೇತ್ರದಲ್ಲಿ ಸತತ 4 ಬಾರಿ ಗೆದ್ದವರು ಶಿಕ್ಷಕರ ಸಮಸ್ಯೆ ಈಡೇರಿಸುವಲ್ಲಿ ವಿಫಲವಾಗಿದ್ದಾರೆ ಎಂದು ಹೇಳಿದರು. ಜೂ.3ರಂದು ಸೋಮವಾರ ನಡೆಯಲಿರುವ ಚುನಾವಣೆಯಲ್ಲಿ ಕರ್ನಾಟಕ ಜನತಾ ಪಕ್ಷದ ಅಭ್ಯರ್ಥಿ ಎಂ.ನಾಗೇಂದ್ರ ಬಾಬು ಅವರಿಗೆ ಪ್ರಥಮ ಪ್ರಾಶಸ್ತ್ಯ ದ ಮತ ನೀಡಿ ಗೆಲ್ಲಿಸಬೇಕು ಎಂದು ಪಕ್ಷದ ರಾಜ್ಯ ಕಾರ್ಯಾಧ್ಯಕ್ಷ ಕದಂಬ ನಾ. ಅಂಬರೀಶ್ ಶಿಕ್ಷಕರ ಮತದಾರರಲ್ಲಿ ಮನವಿ ಮಾಡಿದರು.ಪಟ್ಟಣಕ್ಕೆ ಆಗಮಿಸಿ ಮಾತನಾಡಿದ ಅವರು, ಪಕ್ಷದ ಅಭ್ಯರ್ಥಿ ನಾಗೇಂದ್ರಬಾಬು ಅವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಪರಾನುಭವಗೊಂಡಿದ್ದರು, ಬೆಂಗಳೂರಿನ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಪ್ರೌಢಶಾಲಾ ಶಿಕ್ಷಕರಾಗಿ, ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ್ದಾರೆ. ಪಕ್ಷವು ಅವರನ್ನು ಸ್ಪರ್ಧೆ ಮಾಡಿಸಿದೆ ಕ್ಷೇತ್ರದಲ್ಲಿ ಅವರಿಗೆ ಉತ್ತಮ ವಾತಾವರಣ ವ್ಯಕ್ತವಾಗುತ್ತಿದೆ. ಶಿಕ್ಷಕರು ತಮ್ಮ ಅಮೂಲ್ಯವಾದ ಪ್ರಥಮ ಪ್ರಾಶಸ್ತ್ಯದ ಮತವನ್ನು ಅವರಿಗೆ ನೀಡಿ ಆಶೀರ್ವದಿಸುವ ಮೂಲಕ ತಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಕೋರಿದರು.



ಚಾಮರಾಜನಗರ: ರಾಜ್ಯ ಉಪ್ಪಾರ ಅಭಿವೃದ್ಧಿ ನಿಗಮಕ್ಕೆ ಅಧ್ಯಕ್ಷರನ್ನು ನೇಮಕ ಮಾಡಿ 100 ಕೋಟಿ ಅನು ದಾನವನ್ನು ಮೀಸಲಿಡಬೇಕು ಎಂದು ಚಾಮರಾಜನಗರ ತಾಲೂಕು ಉಪ್ಪಾರ ಸಂಘದ ಅಧ್ಯಕ್ಷ ಪಿ.ಆಂಗರಾಜು ಆಗ್ರಹಿಸಿದರು.ರಾಜ್ಯದಲ್ಲಿ ಉಪ್ಪಾರ ಅಭಿವೃದ್ಧಿ ನಿಗಮ ಸ್ಥಾಪನೆಯಾಗಿ 15 ವರ್ಷ ಕಳೆದಿದ್ದು ನಿಗಮದಿಂದ ಅಭಿವೃದ್ಧಿ ಕುಂಠಿತವಾಗಿದೆ. ಆದ್ದರಿಂದ ಸರ್ಕಾರವು ಸೂಕ್ತ ಅನುದಾನ ನೀಡುವ ಮೂಲಕ ಜನಾಂಗದ ಸರ್ವಾಂಗೀಣ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಸುದ್ದಿಗೋಷ್ಟಿಯಲ್ಲಿ ಮನವಿ ಮಾಡಿದರು. ಸುದ್ದಿಗೋಷ್ಟಿಯಲ್ಲಿ ಸಂಘದ ಉಪಾಧ್ಯಕ್ಷ ಆರ್.ಮಹದೇವಶೆಟ್ಟಿ, ಪ್ರಧಾನ ಕಾರ್ಯದರ್ಶಿ ಎನ್.ಮಹದೇವಸ್ವಾಮಿ, ಮುಖಂಡ ಕೆಂಪನಪುರ ಮಹದೇವಶೆಟ್ಟಿ ಇದ್ದರು.

ಮಳೆ ಉಯ್ತು, ಜಲಾಶಯಕ್ಕೆ ನೀರು ಬಂತು

ಜಲಾಶಯಕ್ಕೆ ಏತನೀರಾವರಿ ಮಾಡ್ತಾರ...!!!

ರಾಜಶೇಖರ ಎಂ ಕೊಮಾರನಪುರ

ಯಳಂದೂರು : ಬೇಸಿಗೆಯ ಬಿಸಿಲು ಯಾವ ಜಲಾಶಯವನ್ನು ಬಿಡದೆ ಇರುವ ನೀರನ್ನೆಲ್ಲೆ ಹಿರಿಕೊಂಡು ಇಂಗೊಗಿ ಬಣಗುಡುತ್ತಿದ್ದುದ್ದು ಸುಳ್ಳಲ್ಲ.

ಈ ಸಲ ಅನುಭವಿಸಿದ್ದ ಬೇಸಿಗೆ ಅಂತಿಂತಹ ಬೇಸಿಗೆಯಲ್ಲ ಬಿರು ಬಿಸಿಲಿನ ಬೇಸಿಗೆ. ಎಷ್ಟರ ಮಟ್ಟಿಗೆ ಬೇಸಿಗೆಯ ಬೇಗೆ ಉಂಟಾಗಿತ್ತು ಎಂದರೆ. ಕಾಡಿನಲ್ಲಿರುವ ಮರಗಳು ತನ್ನ ಎಳೆಗಳನ್ನು ಉದುರಿಸಿಕೊಂಡು ಬಣಗುಡುವ ಮಟ್ಟಿಗೆ ಈ ಸಲದ ಬೇಸಿಗೆಯ ಬಿಸಿಲನ ಧಗೆ ಉರಿಯನ್ನುಂಟು ಮಾಡಿದ್ದು. ತಂಗಾಳಿ ಬೀಸಬೇಕಾಗಿದ್ದ ಕಾಡಿನೊಳಗೆ ಸಂಚರಿಸಿದರೆ ಬಿಸಿಗಾಳಿ ಎದರಾಗಿದ್ದು ಅನುಭವಿಸಿದವರಿಗಷ್ಟೇ ಗೊತ್ತು. ಇದು ಯಳಂದೂರು ತಾಲೂಕಿನ ಗೌಡಹಳ್ಳಿ ಕಾಡಿನ ಮತ್ತು ಕಾಡಂಚಿನ ಜನರ ಬವಣೆಯಾದರೆ. ಪ್ರಾಣಿಗಳ ಭವಣೆ ಏನೆಂದು ನೋಡೋಣ ಬನ್ನಿ.

ತಾಲೂಕಿನ ಗೌಡಹಳ್ಳಿ ಗ್ರಾಮದಿಂದ ಸುಮಾರು ಆರು ಕಿಲೋಮೀಟರ್ ದೂರದಲ್ಲೊಂದು ಜಲಾಶಯವಿದೆ ಇದನ್ನು ಗೌಡಹಳ್ಳಿ ಜಲಾಶಯ ಎಂತಲೂ ಸಹ ಕರೆಯುತ್ತಾರೆ.

ಈ ಜಲಾಶಯವು ಕಾಡಿಗೆ ಹೊಂದಿಕೊಂಡು ನಿರ್ಮಾಣವಾಗಿರುವ ಜಲಾಶಯವಾಗಿದ್ದು ಕಾಡುಪ್ರಾಣಿಗಳ ಸಂಪೂರ್ಣ ಕುಡಿಯುವ ನೀರಿನ ತಾಣವಾಗಿದೆ.

ಈ ಜಲಾಶಯವು ಮಳೆಗಾಲದಲ್ಲಿ ತುಂಬಿ ಬೇಸಿಗೆಯಲ್ಲೂ ಕಾಡುಪ್ರಾಣಿಗಳಿಗೆ ನೀರು ನೀಡುವ ಗಂಗಾಮಾತೆಯಾಗಿದೆ.

ಹೆಚ್ಚಾಗಿ ಮಳೆಯಾದರೆ ಈ ಜಲಾಶಯವು ತುಂಬಿ ಕೋಡಿ ಬಿದ್ದರೆ ಗೌಡಹಳ್ಳಿ, ಮಲಾರಪಾಳ್ಯ, ಅಲ್ಕೆರೆ ಅಗ್ರಹಾರ, ಬೂದಿತಿಟ್ಟು ಸೇರಿಕೊಂಡು ಸುವರ್ಣಾವತಿಯ ನದಿಗೆ ಸೇರುತ್ತದೆ.

ಈ ಜಲಾಶಯವು ತುಂಬಿದರೆ ಸುತ್ತಮತ್ತಲ



ಬೋರೆವೆಲ್ ಗಳಿಗೆ ಅಂತರ್ಜಲದ ಮಟ್ಟ ಉತ್ತಮವಾಗಿತ್ತದೆ ಹಾಗೂ ನೀರಿಲ್ಲನಿಂತೋಗಿದ್ದ ಬೋರ್ ಗಳಲ್ಲೋ ಸಹ ನೀರು ಬರುತ್ತದೆ.

ಈ ಜಲಾಶಯವು ಸಂಪೂರ್ಣ ಭರ್ತಿಯಾದರೆ ವಡಗೆರೆ,ಗೌಡಹಳ್ಳಿ,ಮಲಾರಪಾಳ್ಯ,ಅಲ್ಕೆರೆಅಗ್ರಹಾರ, ದೇವರಹಳ್ಳಿ ಗ್ರಾಮಗಳ ರೈತ ಜಮೀನುಗಳಿಗೆ ನೀರುಣಿ ಬೆಳೆ ಬೆಳೆಯಲು ಸಹಾಯಕಾರಿಯಾಗಿದೆ.

ಹೀಗೆ ರೈತರಿಗೆ ಜನರಿಗೆ ಹಾಗೂ ಕಾಡುಪ್ರಾಣಿಗಳ ಜೀವನಾಡಿಯಾಗಿದ್ದು ಗೌಡಹಳ್ಳಿ ಜಲಾಶಯವು ಈ ವರ್ಷದ ಬೇಸಿಗೆಯ ಬಿರು ಬಿಸಿಲಿಗೆ ನೀರಿಲ್ಲದೆ ಬತ್ತಿಹೋಗಿ ಬಣಗುಟ್ಟಿದ್ದು ಗಟ್ಟೀನಲ್ಲ. ಆದರೀಗ ಕಳೆದ ಒಂದು ವಾರದಿಂದ ಎಡಬಿಡದೆ ಸುರಿದ ಮಳೆಯಿಂದಾಗಿ ಜಲಾಶಯಕ್ಕೆ ನೀರುಬಂದು ಅರ್ಧದಷ್ಟು ತುಂಬಿರುವುದು ರೈತರು ಖುಷಿಯಾದರೆ. ಕಾಡು ಪ್ರಾಣಿಗಳು ಬಹುಶಃ ದಿಲ್ ಖುಷ್ ಆಗಿರುತ್ತವೆ .

ಈ ಬಿರು ಬೇಸಿಗೆಯಲ್ಲಿ ಕಾಡಲ್ಲಿರುವ ಪ್ರಾಣಿಗಳು ಇದೆ ಜಲಾಶಯಕ್ಕೆ ನೀರು ಅರಸಿ ಬಂದಾಗ ಕುಡಿಯಲು ನೀರಿಲ್ಲದೆ ನೀರಾಸೆಯಿಂದ ತಿರುಗಿ ಹೋಗುವ ಪ್ರಾಣಿಗಳನ್ನ ರೈತರು ಕಣ್ಣಾರೆ ನೋಡಿದ್ದು ಮನಕಲಕುವಂತಿತ್ತು.

ಈ ವಾರದಿಂದ ಸುರಿದ ಮಳೆಯಿಂದಾಗಿ ಜಲಾಶಯಕ್ಕೆ ನೀರು ತುಂಬಿರುವುದರಿಂದ ಮೆರಗುಬಂದಿದೆ.

ಈ ಜಲಾಶಯವು ಸಣ್ಣ ನೀರಾವರಿ ಇಲಾಖೆಯ ಸುಪರ್ದಿಗೆ ಒಳಪಟ್ಟಿದ್ದು ಹಿಂದಿನಕಾಲದಿಂದಲೂ ರೈತರಿಗೆ ರೈತರ ಜಮೀನುಗಳಿಗೆ ನೀರು ಕೊಡುತ್ತಿದ್ದ ಈ ಜಲಾಶಯವು ಇದೀಗ ಅಂದರೆ ಕಳೆದ ಹದಿನೈದು ವರ್ಷಗಳಿಂದ ರೈತರ ಜಮೀನುಗಳಿಗೆ ನೀರು ಕೊಡಲಾಗುತ್ತಿಲ್ಲಾ. ಇವಾಗ ಈ ಭಾಗದ ರೈತರ ಬೆಳೆ ಬೆಳೆಯಲು ಜಮೀನುಗಳು ಮಳೆಯನ್ನು ಆಶ್ರಯಿಸಬೇಕಾಗಿದೆ.

ಉತ್ತಮ ಮಳೆಯಾದರೆ ಜಲಾಶಯ ತುಂಬಿದರು ಕಾಲುವೆಗಳಿಂದ ರೈತರ ಜಮಿನುಗಳಿಗೆ ನೀರು ನೀಡಲಾಗುತ್ತಿಲ್ಲ ಏಕೆಂದರೆ ಜಲಾಶಯದಲ್ಲಿ ಊಳು ತುಂಬಿರುವ ಕಾರಣ ನಿಗದಿತ ಪ್ರಮಾಣದ ನೀರು ಶೇಖರಣೆಯಾಗುತ್ತಿಲ್ಲ ಅಲ್ಪಸ್ವಲ್ಪಮಳೆಯಾದರೆ ಆ ನೀರು ಪ್ರಾಣಿಗಳಿಗೆ ಕುಡಿಯಲು ಮೀಸಲಾಗುತ್ತಿದೆ.

ಈ ಜಲಾಶಯದಿಂದ ರೈತರ ಜಮೀನುಗಳಿಗೆ ನೀರು ಬಿಡಲು ನಿರ್ಮಿಸಿದ್ದ ಕಾಲುವೆಗಳು ಇದೀಗ ಸ್ವಲ್ಪ ಮುಚ್ಚಿಹೋಗಿವೆ ಇನ್ನು ಸ್ವಲ್ಪವನ್ನು ಹೊರರಾಜ್ಯದಿಂದ ಬಂದು ರೈತರ ಜಮೀನು ಖರೀದಿಸಿರುವ ಜಮೀನ್ದಾರರು ಮುಚ್ಚಿದ್ದಾರೆ ಹೀಹಾಗಿ ಜಮೀನುಗಳಿಗೆ ನೀರೋಗಲು ಕಾಲುವೆಗಳು ಇಲ್ಲದಂತಾಗಿವೆ.

ಏತ ನೀರಾವರಿಗೆ ರೈತರ ಆಗ್ರಹ :

ಈ ಜಲಾಶಯದ ಅಚ್ಚಕಟ್ಟು ಪ್ರದಶಕ್ಕೆ ಒಳಪಡುವ ವಡಗೆರೆ ಗೌಡಹಳ್ಳಿ, ಕೊಮಾರನಪುರ, ಮಲಾರಪಾಳ್ಯ, ಅಲ್ಕೆರೆಅಗ್ರಹಾರ, ದೇವರಹಳ್ಳಿ ಗ್ರಾಮದ ರೈತರ ಜಮೀನುಗಳಿಗೆ ನೀರುಣಿಸುತ್ತಿದ್ದ ಈ ಜಲಾಶಯದಿಂದ ಇದೀಗ ರೈತರ ಜಮೀನುಗಳಿಗೆ ನೀರಿಲ್ಲದಿರುವುದು ಆತಂಕಕ್ಕೆ ಕಾರಣವಾಗಿದೆ ಈ ಜಲಾಶಯದ ಮೊಗ್ಗಲಿನಲ್ಲಿ ಅಂದರೆ ನಾಲ್ಕು ಕಿಲೋ ಮೀಟರ್ ದೂರದಲ್ಲಿ ಕಬಿನಿ ಮುಖ್ಯ ನಾಲೆಯು ಹಾದುಹೋಗಿದ್ದು ಈ ಕಬಿನಿ ಮುಖ್ಯನಾಲೆಯಿಂದ ಗೌಡಹಳ್ಳಿ ಜಲಾಶಯಕ್ಕೆ ಏತನೀರಾವರಿ ಮೂಲಕ

ಹಿಂದೆ ಈ ಡ್ಯಾಮ್ ನೀರಿ ನಿಂದ ನಾವೆಲ್ಲ ರಾಗಿ ಜೋಳ ಭತ್ತ ಇಂತಹ ಬೆಳೆಗಳನ್ನ ನಮ್ಮ ಜಮೀನುಗಳಲ್ಲಿ ಬೆಳೆಯುತ್ತಿದ್ದೇವು ಆದರೆ ಹದಿನೈದು ವರ್ಷಗಳಂದ ಡ್ಯಾಮಿನಿಂದ ಜಮೀನಿಗೆ ನೀರು ಬರುತ್ತಿಲ್ಲ ಹಾಗಾಗಿ ಮಳೆಯನ್ನು ನಂಬಿ ವ್ಯವಸಾಯ ಮಾಡ್ತಿವಿ ಮಳೆ ಉಯ್ದರೆ ಬೆಳೆಯಾಗುತ್ತೆ. ಮಳೆನೆ ಇಲ್ಲಾಂದರೆ ನಷ್ಟವಾಗುತ್ತದೆ. ಅದ್ದರಿಂದ ನಮ್ಮ ಓಟು ಪಡೆದು ಗೆದ್ದಿರುವ ಜನಪ್ರತಿನಿದಿಗಳಿಗೆ ಕೈ ಮುಗಿದು ಬೇಡಿಕೊಳ್ಳುತ್ತೇವೆ ಈ ಗೌಡಹಳ್ಳಿ ಡ್ಯಾಮಿಗೆ ಕಬಿನಿಚಾನಲ್‌ನಿಂದ ಏತನೀರಾವರಿ ಮಾಡಿ ನೀರುತುಂಬಿಸಿ ನಮ್ಮಂತ ರೈತರಿಗೆ ಅನುಕೂಲ ಮಾಡಿಕೊಟ್ಟು ಪುಣ್ಯಕಟ್ಟಿಕೊಳ ಎಂದು ರೈತ ಮಹದೇವ ಮನವಿ ಮಾಡುತ್ತಾರೆ. ರೈತರ ಮತ್ತು ಪ್ರಾಣಿಗಳ ಜೀವನಾಡಿಯಾಗಿರು ಈ ಜಲಾಶಯಕ್ಕೆ ಜನಪ್ರತಿನಿದಿಗಳು ಸರ್ಕಾರದ ಗಮನ ಸೆಳೆದು ಏತನೀರಾವರಿ ಮಾಡ್ತಾರೋ ಇಲ್ಲವೋ ಕಾದು ನೋಡಬೇಕಾಗಿದೆ.

ನೀರು ತುಂಬಿಸಿದರೆ ಈ ಭಾಗದ ರೈತರಿಗೆ ಬಹಳ ಅನುಕೂಲವಾಗುತ್ತದೆ ಹಾಗೂ ಕಾಡು ಪ್ರಾಣಿಗಳ ಕುಡಿಯುವ ನೀರಿನ ಬವಣೆಯನ್ನು ನೀಗಿಸಬಹುದು ಎನ್ನುತ್ತಾರೆ ಈ ಗ್ರಾಮಗಳ ರೈತರು.

ನಮ್ಮ ಭಾಗದ ಜನಪ್ರತಿನಿಧಿಗಳು ಮನಸ್ಸು ಮಾಡಿದರೆ ಈ ಜಲಾಶಯಕ್ಕೆ ಕಬಿನಿಮುಖ್ಯ ನಾಲೆಯಿಂದ ಏತನೀರಾವರಿಯ ಮೂಲಕ ನೀರು ತುಂಬಿಸಬಹುದು. ಅದ್ದರಿಂದ ಜನರಿಂದ ಆಯ್ಕೆಯಾಗಿರುವ ಜನಪ್ರತಿನಿಧಿಗಳು ಗೌಡಹಳ್ಳಿ ಜಲಾಶಯಕ್ಕೆ ಏತನೀರಾವರಿಯನ್ನು ಮಾಡಿಕೊಡಬೇಕು ಎಂದು ರೈತರು ಆಗ್ರಹಿಸಿದ್ದಾರೆ.



ಕಬ್ಬು ಕಟಾವು ಮಾಡುವಾಗ ಚಿರತೆ ಪ್ರತ್ಯಕ್ಷ, ದಿಕ್ಕಾಪಾಲಾಗಿ ಓಡಿದ ಜನ

ಕಾಯಕಯೋಗಿ ಸುದ್ದಿ

ಚಾಮರಾಜನಗರ: ಜಮೀನಿನಲ್ಲಿ ಕಬ್ಬು ಕಟಾವು ಮಾಡುತ್ತಿದ್ದ ವೇಳೆ ಚಿರತೆಯೊಂದು ಪ್ರತ್ಯಕ್ಷವಾಗಿ ಜನರು ದಿಕ್ಕುಪಾಲಾಗಿ ಓಡಿ ಹೋಗಿರುವ ಘಟನೆ ಗುಂಡ್ಲುಪೇಟೆ ತಾಲೂಕಿನ ಪರಮಾಪುರ ಗ್ರಾಮದ ಹೊರವಲಯದಲ್ಲಿ ನಡೆದಿದೆ.

ಪರಮಾಪುರ ಗ್ರಾಮದ ಶಂಭುಲಿಂಗಪ್ಪ ಎಂಬುವರಿಗೆ ಸೇರಿದ ಜಮೀನಿನಲ್ಲಿ ಕಾರ್ಮಿಕರು ಕಬ್ಬು ಕಟಾವು ಮಾಡುತ್ತಿದ್ದರು. ಈ ವೇಳೆ ಗದ್ದೆಯಲ್ಲಿ ಅಡಗಿ ಕುಳಿತಿದ್ದ ಚಿರತೆ ದಿಢೀರ್ ಅಂತ ಹೊರ ಬಂದಿದ್ದು, ಇದನ್ನು ಕಂಡ ಮಾಲೀಕರು ಹಾಗೂ ಕಾರ್ಮಿಕರು ಗಾಬರಿಗೊಂಡು ದಿಕ್ಕಪಾಲಾಗಿ ಓಡಿಹೋಗಿದ್ದಾರೆ ಎನ್ನಲಾಗಿದೆ. ಕಬ್ಬಿನ ತೋಟದಲ್ಲಿ ಚಿರತೆ ಪ್ರತ್ಯಕ್ಷ ಆಗಿರುವ ಕುರಿತು ಜಮೀನಿನ ಮಾಲೀಕನು ಅರಣ್ಯಾಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ತಕ್ಷಣ ಎಚ್ಚೆತ್ತ ಅರಣ್ಯ ಇಲಾಖೆ ಅಧಿಕಾರಿಗಳು ಶಂಭುಲಿಂಗಪ್ಪ ಜಮೀನಿಗೆ ಬೋನ್ ತಂದಿರಿಸಿದ್ದಾರೆ. ಜೊತೆಗೆ ಸುತ್ತ ಮುತ್ತಲಿನ ಪ್ರದೇಶದಲ್ಲಿಯೂ ಕೂಂಬಿಂಗ್ ನಡೆಸಿದ್ದು, ಚಿರತೆ ಸುಳಿವು ಮಾತ್ರ ಪತ್ತೆಯಾಗಿಲ್ಲ.

ಚಿರತೆ ಸೆರೆಗೆ ಒತ್ತಾಯ: ಪರಮಾಪುರ ಭಾಗದಲ್ಲಿ ಚಿರತೆ ಆಗಿಂದಾಗ್ಗೆ ಕಾಣಿಸಿಕೊಳ್ಳುತ್ತಿದ್ದು, ಕಬ್ಬಿನ ಗದ್ದೆಯಿಂದ ಓಡಿ ಹೋಗಿದೆ. ಇದರಿಂದ ರೈತರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಇದನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರದಲ್ಲಿ ಚಿರತೆ ಸೆರೆಗೆ ಮುಂದಾಗಬೇಕೆಂದು ರೈತರು ಅರಣ್ಯಾಧಿಕಾರಿಗಳಿಗೆ ಒತ್ತಾಯಿಸಿದ್ದಾರೆ.

ವ್ಯಕ್ತಿ ನಾಪತ್ತೆ: ದೂರು ದಾಖಲು



ಯಳಂದೂರು: ದಿನಾಂಕ 21-05-24 ರಂದು ಯಳಂದೂರು ಆಸ್ಪತ್ರೆ ಗೆ ಹೋಗಿ ಬರುವುದಾಗಿ ಹೇಳಿ ಹೋದವರು ವಾಪಸ್ಸುಮನೆಗೆಬಂದಿರುವುದಿಲ್ಲಾ.ಮನೆಯವರು ಎಲ್ಲ ಕಡೆ ಹುಡುಕಿದರು ಪತ್ತೆಯಾಗದ ಕಾರಣ ಈ ದಿನ ದಿನಾಂಕ 23-05-2024 ರಂದು ದೂರು ನೀಡಿರುತ್ತಾರೆ. ಕಾಣೆಯಾದ ವ್ಯಕ್ತಿಯ ಚಹರೆ ಸಾದಾರಣ ಮೈಕಟ್ಟು, 5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಬಿಳಿ ತಲೆಕೂದಲು, ಮನೆಯಿಂದ ಹೋಗುವಾಗ ಕ್ರೀಮ್ ಕಲರ್ ಶರ್ಟ್, ನೀಲಿ ಬಣ್ಣದ ಪಂಚೆ ಧರಿಸಿರುತ್ತಾರೆ. ಈ ವ್ಯಕ್ತಿಯು ಕಂಡುಬಂದಲ್ಲಿ ಯಳಂದೂರು ಪೊಲೀಸ್ ಸ್ಟೇಷನ್ಗೆ ಅಥವ ಕಂಟ್ರೋಲ್ ರೂಮ್ ಗೆ ಮಾಹಿತಿ ನೀಡಲು ಕೋರಿದೆ. ಯಳಂದೂರು ಪೋಲೀಸ್ ಠಾಣೆ 08226-240028, 9480804649, ಜಿಲ್ಲಾ ಪೋಲಿಸ್ ಕಚೇರಿ 08226-222383

ಕುರುಬರಹಳ್ಳಿ ಗೌಡರ ವೈಯಕ್ತಿಕ ವಿಚಾರಕ್ಕೆ ದೇವಾಲಯಕ್ಕೆ ಬಿತ್ತು ಬೀಗ

ಜಾತ್ರೆ ನಡೆಸುವಂತೆ ಪಟ್ಟು ಹಿಡಿದು ತಾಲೂಕು ಕಚೇರಿಗೆ ಮುತ್ತಿಗೆ ಹಾಕಿದ ಗ್ರಾಮಸ್ಥರು

ಕಾಯಕಯೋಗಿ ಸುದ್ದಿ

ಕೊರಟಗೆರೆ: ಊರಿನ ಗೌಡರ ವೈಯಕ್ತಿಕಕಾರಣಕ್ಕೆಗ್ರಾಮದಲ್ಲಿನಡೆಯುವ ಜಾತ್ರೆಯನ್ನ ರದ್ದುಗೊಳಿಸಿರುವುದನ್ನ ವಿರೋಧಿಸಿ ಊರಿನ ಗ್ರಾಮಸ್ಥರು ತಾಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ತಾಲೂಕಿನ ಸಿಎನ್ ದುರ್ಗಾ ಹೋಬಳಿಯ ಕುರಂಕೋಟೆ ಗ್ರಾ.ಪಂ ವ್ಯಾಪ್ತಿಯ ಕುರುಬರಹಳ್ಳಿ ಗ್ರಾಮದಲ್ಲಿ ಪ್ರತಿ ವರ್ಷ ಗ್ರಾಮದ ಆಂಜನೇಯ ಸ್ವಾಮಿ ಜಾತ್ರೆಯನ್ನು ಊರಿನ ಗ್ರಾಮಸ್ಥರೆಲ್ಲಾ ಸೇರಿ ಜಾತ್ರೆಯನ್ನ ಆಚರಣೆ ಮಾಡಿಕೊಂಡು ಬರಲಾಗುತ್ತಿದ್ದು, ಊರಿನ ಗೌಡರ ವೈಯಕ್ತಿಕ ವಿಚಾರಕ್ಕೆ ದೇವಾಲಯಕ್ಕೆ ಬೀಗ ಹಾಕಲಾಗಿದ್ದು ಜಾತ್ರೆ ನಡೆಸುವಂತೆ ಪಟ್ಟು ಹಿಡಿದು ಗ್ರಾಮದ ಮಹಿಳೆಯರು,



ಹಿರಿಯರು,ಯುವಕರು ತಾಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ತಹಶೀಲ್ದಾರ್ ಮಂಜುನಾಥ್ ಮಾತನಾಡಿ ಕುರುಬರಹಳ್ಳಿ ಗ್ರಾಮದಲ್ಲಿ ಜಾತ್ರೆ ವಿಚಾರಕ್ಕೆ ಸಂಬಂಧಪಟ್ಟಂತೆ ಗೊಂದಲಗಳು ಸೃಷ್ಟಿಯಾಗಿ ಗ್ರಾಮಸ್ಥರೆಲ್ಲರೂ ಈ ವಿಚಾರಕ್ಕೆ ಪೋಲಿಸ್ ಠಾಣೆಯಲ್ಲಿ ದೂರು ನೀಡಿ ಕೇಸ್ ದಾಖಲಿಸಿದ್ದಾರೆ.ಲೋಕಸಭಾಚುನಾವಣಾ ಫಲಿತಾಂಶದ ದಿನಗಳೂ ಹತ್ತಿರವೇ ಇದ್ದು ಕಂದಾಯ ಇಲಾಖೆಗೆ ಮತ್ತು ಪೋಲಿಸ್ ಇಲಾಖೆಗೆ ಸಾಕಷ್ಟು ಒತ್ತಡವಿದೆ. ಹಾಗಾಗಿ ಫಲಿತಾಂಶದ ನಂತರದ ದಿನಗಳಲ್ಲಿ ಪೋಲಿಸ್ ಬಂದೋಬಸ್ತ್‌ನೊಂದಿಗೆ ವಿಜೃಂಭಣೆಯಿಂದ ಜಾತ್ರೆ ನಡೆಸಿಕೊಡಲಾಗುವುದು ಎಂದು ಈಗಾಗಲೇ ಗ್ರಾಮಸ್ಥರಿಗೆ ತಿಳಿಸಿದೆ.

ಜೂನ್ 7 ರಿಂದ ಬೃಹತ್ ತುಮಕೂರು ಆರೋಗ್ಯ ಅಭಿಯಾನ

ಕಾಯಕಯೋಗಿ ಸುದ್ದಿ

ತುಮಕೂರು: ಜಿಲ್ಲೆಯಲ್ಲಿ ಜೂನ್ 7 ರಿಂದ ಮೂರು ತಿಂಗಳುಗಳ ಕಾಲ ಬೃಹತ್ ತುಮಕೂರು ಆರೋಗ್ಯ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲೂ ಏಕ ಕಾಲದಲ್ಲಿ ಕಾರ್ಯಕ್ರಮಕ್ಕೆಚಾಲನೆನೀಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಭು ಜಿ ತಿಳಿಸಿದರು.

ಜಿಲ್ಲಾಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಸಂಜೆ ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಈ



ಅಭಿಯಾನದಲ್ಲಿ 30 ವರ್ಷ ಮೇಲ್ಪಟ್ಟವರ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ನೀಡಲಾಗುವುದು. ಗ್ರಾಮೀಣ ಪ್ರದೇಶದಲ್ಲಿ ಮನೆ-ಮನೆಗೆ ತೆರಳಿ ಆರೋಗ್ಯ ತಪಾಸಣೆ ನಡೆಸಲಾಗುವುದು. ತಪಾಸಣೆ ವೇಳೆ ರೋಗ ಪತ್ತೆಯಾದಲ್ಲಿ ಸಂ



ಕನಕಪುರ : ಇತ್ತೀಚಿಗೆ ಅಂತರ ಧರ್ಮದ ವಿವಾಹವು ಕೋಮು ಸ್ವರೂಪ ಪಡೆಯುತ್ತಿದ್ದು ಗಲಭೆ, ಸಾಮರಸ್ಯ ಹಾಳು ಮಾಡುತ್ತಿರುವ ಘಟನೆಗಳು ರಾಜ್ಯದಲ್ಲಿ ಜರುಗುತ್ತಿವೆ. ಇತ್ತೀಚಿಗೆ ಹಲವು ಹಿಂದೂ ಹೆಣ್ಣುಮಕ್ಕಳಗಳ ಕಣ್ಗಲಗಳನ್ನು ಜಿಹಾದಿಗಳು ನಡೆಸುತ್ತಿದ್ದು ಇದಕ್ಕೆ ಪೂರಕವಾಗಿ ರಾಜ್ಯದ ವಿವಾಹ ನೊಂದಣಿ ಅಧಿಕಾರಿ ಕಚೇರಿಗಳಲ್ಲಿ ಸರಿಯಾದ ಕ್ರಮದಲ್ಲಿ ದಾಖಲೆ ಪರಿಶೀಲಸದೇ, ನೋಟೀಸ್ ಬೋರ್ಡ್ ಗೆ ಪ್ರತಿ ಹಾಕದೇ ವಿವಾಹ ಮಾಡುವ ಬಗ್ಗೆ ದೂರುಗಳದ್ದು ತಮ್ಮ ಕಚೇರಿಯಲ್ಲಿ ಮತಾಂತರ ತಡೆ –2022 ಆಕ್ಟ್ ಸೇರಿದಂತೆ ಯಾವುದೇ ಕಾನೂನಿನ ಲೋಪಗಳು ಜರುಗದಂತೆ ಜಾಗ್ರತೆ ವಹಿಸಿ ಕೋಮು ಸೂಕ್ಷ್ಮ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲು ಆಗ್ರಹಿಸುತ್ತೇವೆ. ಇಂದು ಕನಕಪುರ ತಾಲ್ಲೂಕು ಸಬ್ ರಿಜಿಸ್ಟರ್ ಕಚೇರಿಗೆ ರಾಮನಗರ ಜಿಲ್ಲಾ ಶ್ರೀರಾಮ ಸೇನಾ ವತಿಯಿಂದ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ನಾಗಾರ್ಜುನಗೌಡ ಜಿಲ್ಲಾ ಕಾರ್ಯದರ್ಶಿ ನವೀನ್ ಕೆಎನ್ ತಾಲೂಕು ಅಧ್ಯಕ್ಷ ರಾಜಗೋಪಾಲ್ , ಅರುಣ ಉದಾರಹಳ್ಳಿ, ಪವನ್ ಕುಮಾರ್, ಮೋಹನ್ ಕುಮಾರ್ ಕೆ ವಿ, ಮಹೇಶ್ ಗೌಡ ಹಾಗಕಾರ್ಯಕರ್ತರು ಹಾಜರಿದ್ದರು.

ಅರ್ಬನ್ ಕೋ ಆಪರೇಟಿವ್ ಸೊಸೈಟಿಗೆ ನಿವ್ವಳ ಲಾಭ

ಕನಕಪುರ: ಅರ್ಬನ್ ಕೋ ಆಪರೇಟಿವ್ ಸೊಸೈಟಿಯ 2022–23ನೇ ಸಾಲಿನಲ್ಲಿ 67,22,625 ರೂ. ನಿವ್ವಳ ಲಾಭವನ್ನು ಗಳಿಸಿದೆ ಎಂದು ಸೊಸೈಟಿ ಅಧ್ಯಕ್ಷ ಕಬ್ಬಾಳೆಗೌಡ ತಿಳಿಸಿದರು. ನಗರದ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ 2022–23ನೇ ಸಾಲಿನ ಸರ್ವ ಸದಸ್ಯರ ವಿಶೇಷ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, 2022–23ನೇ ಸಾಲಿನಲ್ಲಿ ಸೊಸೈಟಿಯು ಲಾಭಾಂಶದಲ್ಲಿದೆ. ಕಳೆದ ಬಾರಿ ಶೇ.7 ಲಾಭ ನೀಡಲಾಗಿತ್ತು. ಈ ಬಾರಿ ಶೇ.7.5 ಲಾಭ ನೀಡಲಾಗಿದ್ದು ಕಳೆದ ಸಾಲಿಗಿಂತ 05% ಹೆಚ್ಚು ಲಾಭವನ್ನು ನೀಡಲಾಗಿದೆ. ಹಾಗೂ ಸಂಘದ ಹಣವನ್ನು ದುರುಪಯೋಗ ಪಡಿಸಿಕೊಂಡವರ ವಿರುದ್ಧ ಸೂಕ್ತ ಕಾನೂನು ಕೈಗೊಳ್ಳಲಾಗುವುದು. ಈ ಹಿಂದೆ ಸಂಘದ ಹಣವನ್ನು ದುರುಪಯೋಗ ಪಡಿಸಿಕೊಂಡ 9 ಮಂದಿಯ ವಿರುದ್ಧ ದೂರು ದಾಖಲಿಸಲಾಗಿದೆ. ದುರುಪಯೋಗಪಡಿಸಿಕೊಂಡ ಹಣವನ್ನು ವಾಪಸ್ ಪಡೆಯಲು ಕಾನೂನು ಕ್ರಮ ಕೈಗೊಳ್ಳಲಾಗಿದೆ, ಪ್ರಸಕ್ತ ಸಾಲಿನ ಲೆಕ್ಕಪರಿಶೋಧನಾ ವರದಿ, ಲೆಕ್ಕ ಪರಿಶೋಧಕರ ನೇಮಕ ಸೇರಿ ವಿಷಯಗಳನ್ನು ಸಭೆ ಸರ್ವಾನುಮತದಿಂದ ಅಂಗೀಕರಿಸಿತು. ಸೊಸೈಟಿ ಪ್ರಧಾನ ಕಾರ್ಯದರ್ಶಿ ಎಂ.ಶೋಭಾ ನಿರೂಪಿಸಿದರು. ಚುಡಾಮಣಿ, ಡಾ. ವಿಜಯಕುಮಾರ್, ರಾಮಚಂದ್ರ ಉಪಾಧ್ಯ, ರಾಮಚಂದ್ರ, ರಜಿನಿ, ಮಂಜುಳಾ, ಬೋರಪ್ಪ, ಡಿ. ಶ್ರೀನಿವಾಸ್, ಸ್ಟುಡಿಯೋ ಚಂದ್ರು ಉಪಸ್ಥಿತರಿದ್ದರು.

ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ



ಹಾಸನ: ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಬೇಲೂರು ತಾಲ್ಲೂಕಿನಲ್ಲಿರುವ ದ್ವಿ–ವಿದ್ಯುತ್ ಮಾರ್ಗಗಳ ಗೋಪುರಗಳ ಮೇಲೆ ಹಾಲಿ ಇರುವ 66ಕೆ.ವಿ ಸಕಲೇಶಪುರ– ಅರೇಹಳ್ಳಿ ವಿದ್ಯುತ್ ಮಾರ್ಗದ ಗೋಪುರ ಕಾಮಗಾರಿ ಹಾಗೂ ವಾಹಕ ಜೋಡಣೆ ಕಾಮಗಾರಿಗೆ ಸಂಬಂಧಿಸಿದಂತೆ ಮೇ 29 ರಿಂದ 31 ರವರೆಗೆ ಬೆಳಿಗ್ಗೆ 07 ಗಂಟೆಯಿಂದ ಸಂಜೆ 6 ಗಂಟೆಯವರೆಗೆ 66 ಕೆ.ವಿ ಸಕಲೇಶಪುರ– ಅರೇಹಳ್ಳಿ ವಿದ್ಯುತ್ ಮಾರ್ಗದ ಲೈನ್‌ಕ್ಲಿಯರ್ ತೆಗೆದುಕೊಳ್ಳುವುದರಿಂದ 66/11 ಕೆ.ವಿ ಅರೇಹಳ್ಳಿ ಮತ್ತು ಹಾನಬಾಳು ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ 11 ಕೆ.ವಿ ಪೂರಕಗಳ ಗ್ರಾಹಕರಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸಲು ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಜೂ.2ರ ಮಧ್ಯರಾತ್ರಿಯಿಂದ ನಿಷೇದಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಆದೇಶ

ಹಾಸನ : ಕರ್ನಾಟಕ ವಿಧಾನ ಪರಿಷತ್ತಿಗೆ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರಗಳ ಚುನಾವಣೆ–2024ರ ಮತದಾನ ಕೇಂದ್ರಗಳ ಸುತ್ತ 100 ಮೀಟರ್ ವ್ಯಾಪ್ತಿಯ ಪ್ರದೇಶದಲ್ಲಿ ಜೂ.02 ರ ಮಧ್ಯರಾತ್ರಿ 12 ಗಂಟೆಯಿಂದ ಜೂ. 03 ರ ಮಧ್ಯರಾತ್ರಿ 12 ಗಂಟೆಯವರೆಗೆ ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಗಣನೆಗೆ ತೆಗೆದುಕೊಂಡು ಸಾರ್ವಜನಿಕ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಮೂಲಕ ಮುಕ್ತ ಮತ್ತು ನ್ಯಾಯಯುತ ಹಾಗೂ ನಿಷ್ಪಕ್ಷಪಾತವಾಗಿ ಚುನಾವಣೆಯನ್ನು ನಡೆಸುವ ನಿಟ್ಟಿನಲ್ಲಿ ಸಿ.ಆರ್.ಪಿ.ಸಿ ಸೆಕ್ಷನ್ 144 ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ನಿಷೇದಾಜ್ಞೆಯನ್ನು ಜಾರಿಗೊಳಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಮತದಾನ ಕೇಂದ್ರಗಳ 100 ಮೀ ವ್ಯಾಪ್ತಿಯಲ್ಲಿಮೇಲೆತಿಳಿಸಿದಅವಧಿಯಲ್ಲಿ ಮತದಾನ ಉದ್ದೇಶದಿಂದ ಮತದಾನ ಕಾರ್ಯಕ್ಕೆ ಬರುವ ಮತದಾರರನ್ನು ಹೊರತುಪಡಿಸಿ ಇತರೇ ವ್ಯಕ್ತಿಗಳು ಸಕಾರಣವಿಲ್ಲದೇ ಐದು ಅಥವಾ ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಗುಂಪು ಸೇರುವುದನ್ನು ನಿಷೇಧಿಸಿದೆ. ಯಾವುದೇ ಆಯುಧ, ಕುಡುಗೋಲು, ಖಡ್ಗ, ಭರ್ಜಿ, ಚೂರಿ, ದೊಣ್ಣೆ, ಲಾಠಿ ಅಥವಾ ದೈಹಿಕ ದಂಡನೆಗೆ ಕಾರಣವಾಗುವ ಅಥವಾ ಪೂರಕವಾಗುವ ಇನ್ಯಾವುದೇ ವಸ್ತುಗಳನ್ನು ಹೊಂದುವುದನ್ನು ಮತ್ತು ಸಾಗಾಟ ಮಾಡುವುದನ್ನು ನಿಷೇಧಿಸಿದೆ.

ಜಿಲ್ಲೆಯ ಕರ್ನಾಟಕ ವಿಧಾನ ಪರಿಷತ್ತಿಗೆ ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರಗಳ ಚುನಾವಣೆ–2024ರ ಮತದಾನ ಕೇಂದ್ರಗಳ ವಿವರ:– ಹಾಸನ ತಾಲ್ಲೂಕಿನಲ್ಲಿ ಹಾಸನ ಗ್ರಾಮಾಂತರ ಕೊಠಡಿ ಸಂಖ್ಯೆ–01 ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು. ಗಂಧದ ಕೋಟೆ ಅವರಣ, ಆರ್.ಸಿ ರಸ್ತೆ, ಹಾಸನ ಪಶ್ಚಿಮ: ಕೊಠಡಿ ಸಂಖ್ಯೆ–02 ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು. ಪ್ರೌಢಶಾಲಾ ವಿಭಾಗ, ಗಂಧದ ಕೋಟೆ ಅವರಣ, ಆರ್.ಸಿ ರಸ್ತೆ, ಹಾಸನ ಪೂರ್ವ: ಕೊಠಡಿ ಸಂಖ್ಯೆ–01 ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು. ಪ್ರೌಢಶಾಲಾ ವಿಭಾಗ. ಗಂಧದ ಕೋಟೆ ಅವರಣ, ಆರ್.ಸಿ ರಸ್ತೆ ಆಲೂರು ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ 01 ಮಿನಿವಿಧಾನಸೌಧ ಕಟ್ಟಡ ಆಲೂರು ತಾಲ್ಲೂಕು, ಅರಸೀಕೆರೆ ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–01 ಮಿನಿವಿಧಾನಸೌಧ ಕಟ್ಟಡ ಅರಸೀಕೆರೆ ಅರಕಲಗೂಡು ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–04 ಮಿನಿವಿಧಾನಸೌಧ ಕಟ್ಟಡ ಅರಕಲಗೂಡು, ಬೇಲೂರು ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–05 ಮಿನಿವಿಧಾನಸೌಧ ಕಟ್ಟಡ ಬೇಲೂರು, ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–15 ಮಿನಿವಿಧಾನಸೌಧ ಕಟ್ಟಡ ಚನ್ನರಾಯಪಟ್ಟಣ, ಹೊಳೆನರಸೀಪುರ ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–01 ಮಿನಿವಿಧಾನಸೌಧ ಕಟ್ಟಡ ಹೊಳೆನರಸೀಪುರ, ಸಕಲೇಶಪುರ ತಾಲ್ಲೂಕಿನಲ್ಲಿ ಕೊಠಡಿ ಸಂಖ್ಯೆ–06 ಮಿನಿವಿಧಾನಸೌಧ ಕಟ್ಟಡ ಸಕಲೇಶಪುರ.

ಈ ಆದೇಶವು ಸರಕಾರದಿಂದ ನಡೆಸಲ್ಪಡುವ ಯಾವುದೇ ಕಾರ್ಯಕ್ರಮ ಸಭೆಸಮಾರಂಭಗಳಿಗೆಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ನಿಷೇದಾಜ್ಞೆಯನ್ನು ವಿಧಿಸಿ ಆದೇಶಿಸಿರುತ್ತಾರೆ.

ಪದವೀಧರರ ಕ್ಷೇತ್ರದಲ್ಲಿ ಬದಲಾವಣೆ ತರಲು ಅವಕಾಶ ಕೊಡಿ: ಉದಯ್ ಸಿಂಗ್

ಕಾಯಕಯೋಗಿ ಸುದ್ದಿ



ಕನಕಪುರ: ಕೆಪಿಎಸ್ಸಿಯಲ್ಲಿ ನಡೆಯುತ್ತಿರುವ ಹಗರಣಗಳು, ನಿರುದ್ಯೋಗ ಸಮಸ್ಯೆಯಿಂದ ಪದವೀಧರರ ಸ್ಥಿತಿ ಶೋಚನೀಯವಾಗಿದೆ ಈ ಕ್ಷೇತ್ರದಲ್ಲಿ ಬದಲಾವಣೆ ತರಲು ಪದವೀಧರ ಮತದಾರರು ನನಗೆ ಒಂದು ಅವಕಾಶ ಕೊಡಬೇಕು ಎಂದು ಪದವೀಧರ ಕ್ಷೇತ್ರದ ಚುನಾವಣೆಯ ಪಕ್ಷೇತರ ಅಭ್ಯರ್ಥಿ ಆರ್. ಎಸ್. ಉದಯ್ ಸಿಂಗ್ ಮನವಿ ಮಾಡಿದರು.

ನಗರದ ರೋಟರಿ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ಅವರು ನಾನು ರಾಜಕಾರಣಿ ಅಲ್ಲ ನಾನು ಹೈಕೋರ್ಟ್ ನಲ್ಲಿ ವಕೀಲನಾಗಿ ಸೇವೆ ಸಲ್ಲಿಸುತ್ತಿದ್ದು ಪದವೀದರರ ಸಮಸ್ಯೆಗಳನ್ನು ಬಗೆಹರಿಸಬೇಕು, ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಬೇಕು ಎಂಬುದು ನನ್ನ ಗುರಿ ಕೆಲವರು ಪದವೀಧರರ ಪ್ರತಿನಿಧಿಸುತ್ತೇವೆ ಎಂದು ಚುನಾವಣೆಬಂದಾಗ ಬಂದು ಹೋಗ್ತಾರೆ ಚುನಾವಣೆ ನಂತರ ಮಾಯವಾಗುತ್ತಾರೆ ಸರ್ಕಾರದಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದರೂ ಅದನ್ನು ಭರ್ತಿ ಮಾಡಲು ಯಾರು ಸಹ ಹೋರಾಟ ಮಾಡುವುದಿಲ್ಲ ಅವರ ನಿಷ್ಕ್ರಿಯತೆ ನೋಡಿ ಈ ಕ್ಷೇತ್ರದಲ್ಲಿ ಬದಲಾವಣೆ ತರಬೇಕು ಎಂದು ಪಕ್ಷೇತರಾಗಿ ಸ್ಪರ್ಧೆ' ಮಾಡಿರುವುದಾಗಿ ತಿಳಿಸಿದರು.

ಕೆಪಿಎಸ್ಸಿಯಲ್ಲಿ ನೂರಾರು ಹಗರಣಗಳು ನಡೆದಿವೆ ಅದರ ಪರಿಣಾಮ ಬಡವರು ಮತ್ತು ಮಧ್ಯಮ ವರ್ಗದವರ ಪದವೀಧರರ ಮೇಲೆ ಬೀಳುತ್ತದೆ ಕೆಲವರು ಪಕ್ಷದ ಚಿಹ್ನೆ ಯಲ್ಲಿ ಸ್ಪರ್ಧೆ ಮಾಡಿದರೆ ಗೆಲ್ಲುತ್ತೇನೆ ಎಂದು ಹಗಲು ಗನಸು ಕಾಣುತ್ತಿದ್ದಾರೆ,ಬಿಜೆಪಿ ಅಭ್ಯರ್ಥಿಗೆ 6 ವರ್ಷಗಳ ಅವಕಾಶ ಕೊಟ್ಟಿದ್ದರೂ ಸಹ ಸಮಸ್ಯೆ ಯನ್ನ ಬಗೆಹರಿಸುವ ಕೆಲಸ ಮಾಡಲಿಲ್ಲ ಈಗ ಮತ್ತೊಮ್ಮೆ ಸ್ಪರ್ಧೆ ಮಾಡಿದ್ದಾರೆ ಕಾಂಗ್ರೆಸ್‌ಅಭ್ಯರ್ಥಿ ರಾಮೋಜಿ ಗೌಡ 2012 ರಿಂದಲೂ ಕಣದಲ್ಲಿದ್ದಾರೆ ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಹೆಚ್ಚಾಗುತ್ತಿದೆ ಈ ಸಮಸ್ಯೆ ವಿರುದ್ಧ ಎಷ್ಟು ದಿನ ಹೋರಾಟ ಮಾಡಿದ್ದಾರೆ ಮತ್ತೆ ಚುನಾವಣೆಗೆ ಸ್ಪರ್ಧೆ ಮಾಡಲು ಇವರಿಗೆ ಯಾದ ನೈತಿಕತೆ ಇದೆ ಎಂದು ಪ್ರಶ್ನೆ ಮಾಡಿದರು.

ಪದವೀಧರರಿಗೆ ಶಿಕ್ಷಣವೇ ಆಸ್ತಿ ಆದೇ ನಮ್ಮ ಸಾಧನೆ ಸಂವಿಧಾನ ನಮಗೆ ಪದವೀಧರ ಕ್ಷೇತ್ರದ ಅಭ್ಯರ್ಥಿ ಆಯ್ಕೆ ಮಾಡಲು ಮತದಾನದ ವಿಶೇಷ ಅಧಿಕಾರ ಕೊಟ್ಟಿದೆ ಅದನ್ನು ಗಿಪ್ಟ್ ಕೊಟ್ಟು ಖರೀದಿ ಮಾಡಿ ಈ ಕ್ಷೇತ್ರವನ್ನು ಅಪವಿತ್ರ ಗೊಳಿ ಸುತ್ತಿದ್ದಾರೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ಸೌಲಭ್ಯಗಳ ಕೊರತೆ

ಕಾಯಕಯೋಗಿ ಸುದ್ದಿ

ಕನಕಪುರ ಸರ್ಕಾರಿ ಶಾಲೆಗಳೆಂದರೆ ಮೂಗು ಮುರಿಯುವ ಕಾಲದಲ್ಲಿ ಏಳಗಹಳ್ಳಿ ಗ್ರಾಮದಲ್ಲಿ ತಲೆಯುತ್ತಿರುವ ಪಂಚಾಯಿತಿ ಪಬ್ಲಿಕ್ ಶಾಲೆ ಪೋಷಕರು ಮತ್ತು ಮಕ್ಕಳನ್ನು ಸೆಳೆಯುತ್ತಿದೆ

ಸರ್ಕಾರಿ ಶಾಲೆಗಳೆಂದರೆ ಅಲ್ಲಿ ಗುಣಮಟ್ಟದ ಶಿಕ್ಷಣ ಇಲ್ಲ ಕೊಠಡಿ ಶಿಕ್ಷಕರ ಕೊರತೆ ಶೌಚಾಲಯ ಕ್ರೀಡಾಂಗಣ ಸೇರಿದಂತೆ ಮೂಲಸೌಕರ್ಯ ಸೌಲಭ್ಯ ಇಲ್ಲ ಎಂಬ ಸಾಲು ಸಾಲು ಸಮಸ್ಯೆಗಳು ಪೋಷಕರ ವಲಯದಲ್ಲಿ ಕೇಳಿಬರುತ್ತದೆ ಆದರೆ ಏಳಗಹಳ್ಳಿ ಗ್ರಾಮದಲ್ಲಿ ತಲೆಯುತ್ತಿರುವ ಪಂಚಾಯಿತಿ ಪಬ್ಲಿಕ್ ಶಾಲೆ ಇದಕ್ಕೆ ತದ್ವಿರುದ್ಧವಾಗಿದೆ

ಖಾಸಗಿ ಶಾಲೆಗೆ ಶೆಡ್ಡು ಹೊಡೆಯುವ ರೀತಿಯಲ್ಲಿ ತಲೆಯೆತ್ತಿರುವ ಪಂಚಾಯತಿ ಪಬ್ಲಿಕ್ ಶಾಲೆ ಸರ್ಕಾರಿ ಶಾಲೆಗಳತ್ತ ಪೋಷಕರು ಮತ್ತು ಮಕ್ಕಳನ್ನು ತನ್ನತ್ತ ಸೆಳೆಯುತ್ತಿದೆ..

ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು ಎಂದು ಪ್ರತಿ ಎರಡು ಪಂಚಾಯತಿಗೆ ಒಂದು ಮಾದರಿ ಶಾಲೆ ನಿರ್ಮಾಣ ಮಾಡಿ ಈ ಮಾದರಿ ಯಶಸ್ವಿಯಾದರೆ ಇಡೀ ರಾಜ್ಯಕ್ಕೆ ವಿಸ್ತರಣೆ ಮಾಡಬೇಕು ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಈಗಾಗಲೇ ಚಿಂತನೆ ನಡೆಸಿದ್ದಾರೆ ಅದೇ ಮಾದರಿಯಲ್ಲಿ ಶಿಕ್ಷಣ ಇಲಾಖೆ ಮತ್ತು ಸ್ಥಳೀಯ ಮುಖಂಡರು ಸಹಕಾರದಿಂದ ಖಾಸಗಿ ಶಾಲೆಗೆ ಶೆಡ್ಡು ಹೊಡೆಯುವ ರೀತಿಯಲ್ಲಿ ಪಂಚಾಯಿತಿ ಪಬ್ಲಿಕ್ ಶಾಲೆ ತಲೆ ಎತ್ತಿದೆ.

ಉಯ್ಯಂಬಳಿ ಹೋಬಳಿಯ ಏಳಗ ಹಳ್ಳಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಇತ್ತು ಗ್ರಾಮದ ಸುಮಾರು 130ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಶಾಲೆಯಲ್ಲಿ ಶಿಕ್ಷಣ ಪಡೆಯುತ್ತಿದ್ದರು ಕಳೆದ 2023ರ ಶೈಕ್ಷಣಿಕ ಸಾಲಿನಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು ಪಬ್ಲಿಕ್ ಶಾಲೆ ನಿರ್ಮಾಣ ಮಾಡಲು ಅಂದಿನ ಬಿಇಒ ಜಯಲಕ್ಷ್ಮಿ ಅವರು ಗಮನಕ್ಕೆ ಸುತ್ತಮುತ್ತಲ ಗ್ರಾಮದ ಮಕ್ಕಳ ಪೋಷಕರನ್ನು ಕರೆದು ಸಭೆ ಮಾಡಿ ಒಪ್ಪಿಗೆ ಪಡೆದು ಪಂಚಾಯಿತಿ ಪಬ್ಲಿಕ್ ಶಾಲೆ ನಿರ್ಮಾಣಕ್ಕೆ ತೀರ್ಮಾನಿಸಿ ಗ್ರಾಮ ಪಂಚಾಯಿತಿ ಅನುದಾನ ಮತ್ತು ದಾನಿಗಳ ಸಹಾಯದಿಂದ ಪಂಚಾಯಿತಿ ಪಬ್ಲಿಕ್ ಶಾಲೆ ನಿರ್ಮಾಣ ಮಾಡಲಾಗಿದೆ.

ಈ ಹಿಂದೆ ಶಾಲೆಯಲ್ಲಿ ನಾಲ್ಕು ಕೊಠಡಿಗಳು ಮಾತ್ರ ಇದ್ದವು .ಈಗ ಹೆಚ್ಚುವರಿಯಾಗಿ 8 ಕೊಠಡಿಗಳನ್ನು ನಿರ್ಮಾಣ ಮಾಡಲಾಗಿದೆ. ಎಂಟು ಕೊಠಡಿಗಳಲ್ಲಿ ಒಂದರಿಂದ ಎಂಟನೇ ತರಗತಿವರೆಗೆ ಒಂದೊಂದು ತರಗತಿ ವಿದ್ಯಾರ್ಥಿಗಳಿಗೆ ಒಂದೊಂದು ಕೊಠಡಿಗಳಿದ್ದು ಮತ್ತೊಂದು ಕೊಠಡಿಯಲ್ಲಿ ಕಂಪ್ಯೂಟರ್ ಶಿಕ್ಷಣ ಮತ್ತು ವಿಜ್ಞಾನ ವಿಭಾಗದ ಲ್ಯಾಬ್ ಹಾಗೂ ಗ್ರಂಥಾಲಯ ನಿರ್ಮಾಣ ಮಾಡಲಾಗಿದೆ. ಮತ್ತೊಂದು ಕೊಠಡಿಯಲ್ಲಿ ಮಕ್ಕಳಿಗೆ ಬೆಳಗಿನ ಉಪಹಾರ ಮಧ್ಯಾಹ್ನದ ಬಿಸಿ ಊಟ ಸೇವಿಸಲು ದಾಸೋಹ ಭವನ ನಿರ್ಮಾಣ ಮಾಡಲಾಗಿದೆ.

ಸರ್ಕಾರದಿಂದ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟದ ವ್ಯವಸ್ಥೆ ಇದೆ ಈ ಶಾಲೆಯಲ್ಲಿ 2024ನೇ ಶೈಕ್ಷಣಿಕ ವರ್ಷದಿಂದ ಒಂದನೇ ತರಗತಿ ಮಕ್ಕಳಿಗೆ ಆಂಗ್ಲ ಭಾಷೆ ಶಿಕ್ಷಣ ಕೊಡಲು ಈಗಾಗಲೇ ಸರ್ಕಾರದಿಂದ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ ಇದರಲ್ಲಿ ಒಬ್ಬರು ಮುಖ್ಯ ಶಿಕ್ಷಕರು ಒಬ್ಬರು ದೈಹಿಕ ಶಿಕ್ಷಕರು ಮತ್ತೊಬ್ಬರು ಸಹ ಶಿಕ್ಷಕರು ಮೂವರು ಕಾಯಂ ಶಿಕ್ಷಕರಿದು ಸ್ಪೋಕನ್ ಇಂಗ್ಲಿಷ್ ಕಂಪ್ಯೂಟರ್ ಶಿಕ್ಷಣ ಶಿಕ್ಷಕರು ಸೇರಿದಂತೆ ಎಂಟು ಅತಿಥಿ ಶಿಕ್ಷಕರು ಸೇರಿ ಒಟ್ಟು 11 ಜನ ಶಿಕ್ಷಕರು ಕೆಲಸ ಮಾಡಿದ್ದಾರೆ.

> **ನಾನು ನನ್ನ ಮಕ್ಕಳನ್ನು ಖಾಸಗಿ ಶಾಲೆಗೆ ದಾಖಲಿಸಿ ಸಾವಿರಾರು ರೂಪಾಯಿ ಶುಲ್ಕ ಕಟ್ಟುತ್ತಿದೆ ಆದರೆ ಈಗ ನಮ್ಮ ಗ್ರಾಮದಲ್ಲಿ ಪಂಚಾಯತಿ ಪಬ್ಲಿಕ್ ಶಾಲೆ ನಿರ್ಮಾಣ ಮಾಡಿ ಖಾಸಗಿ ಶಾಲೆಯಂತೆ ಎಲ್ಲಾ ರೀತಿ ಸೌಲಭ್ಯ ಕಲ್ಪಿಸಿಕೊಟ್ಟಿದ್ದಾರೆ ನಮ್ಮ ಮಕ್ಕಳನ್ನು ಇದೇ ಶಾಲೆಗೆ ದಾಖಲಿಸಿದ್ದೇನೆ ಅವರ ಶೈಕ್ಷಣಿಕ ಪ್ರಗತಿ ಉತ್ತಮವಾಗಿದೆ ಪೋಷಕರು ಖಾಸಗಿ ಶಾಲೆ ವ್ಯಾಮೋಹ ಬಿಟ್ಟು ತಮ್ಮ ಮಕ್ಕಳನ್ನು ಪಬ್ಲಿಕ್ ಶಾಲೆಯಲ್ಲ ದಾಖಲಿಸಿ.**
>
> **– ಮಹದೇವ್**
> **ಪೋಷಕರು ಏಳಗಹಳ್ಳಿ ಗ್ರಾಮ.**

ಸರ್ಕಾರಿ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟದ ವ್ಯವಸ್ಥೆ ಇದೆ ಈ ಶಾಲೆಯಲ್ಲಿ 2024ನೇ ಶೈಕ್ಷಣಿಕ ವರ್ಷದಿಂದ ಒಂದನೇ ತರಗತಿ ಮಕ್ಕಳಿಗೆ ಆಂಗ್ಲ ಭಾಷೆ ಶಿಕ್ಷಣ ಕೊಡಲು ಈಗಾಗಲೇ ಸರ್ಕಾರದಿಂದ ಶಿಕ್ಷಕರನ್ನು ನಿಯೋಜನೆ ಮಾಡಲಾಗಿದೆ ಇದರಲ್ಲಿ ಒಬ್ಬರು ಮುಖ್ಯ ಶಿಕ್ಷಕರು ಒಬ್ಬರು ದೈಹಿಕ ಶಿಕ್ಷಕರು ಮತ್ತೊಬ್ಬರು ಸಹ ಶಿಕ್ಷಕರು ಮೂವರು ಕಾಯಂ ಶಿಕ್ಷಕರಿದು ಸ್ಪೋಕನ್ ಇಂಗ್ಲಿಷ್ ಕಂಪ್ಯೂಟರ್ ಶಿಕ್ಷಣ ಶಿಕ್ಷಕರು ಸೇರಿದಂತೆ ಎಂಟು ಅತಿಥಿ ಶಿಕ್ಷಕರು ಸೇರಿ ಒಟ್ಟು 11 ಜನ ಶಿಕ್ಷಕರು ಕೆಲಸ ಮಾಡಿದ್ದಾರೆ.

ಪಂಚಾಯತಿ

ಕಾಯಕಯೋಗಿ

29–05–2024
ಬುಧವಾರ

ಹಾಕಿ ದಂತಕತೆ ಧ್ಯಾನ್ ಚಂದ್

ಅಲ್ಲ, ಪ್ರಪಂಚದಲ್ಲಿಯೇ ಅತ್ಯಂತ ಶ್ರೇಷ್ಠ ಹಾಕಿಪಟು. ಇಡೀ ಪ್ರಪಂಚದಲ್ಲಿಯೇ ಇಲ್ಲಿಯವರೆಗೆ ಅವರನ್ನು ಸರಿಗಟ್ಟುವ ಯಾವ ಆಟಗಾರನೂ ಇಲ್ಲ ಎಂಬುದು ಅಚ್ಚರಿಯ ಸಂಗತಿ. ಜರ್ಮನಿಯ ಸರ್ವಾಧಿಕಾರಿ ಹಿಟ್ಲರ್‌ನನ್ನು ಬೆರಗುಗೆಣ್ಣಟಿಜಜಜಿಟಿಜಜಳಿಸಿದ ಅದ್ಭುತ ಹಾಕಿ ಆಟಗಾರನೂ ಹೌದು. ಭಾರತ ಸರಕಾರವು ಅವರಿಗೆ ಪದ್ಮ ವಿಭೂಷಣ ಪ್ರಶಸ್ತಿ ನೀಡಿದೆ. ಎಲ್ಲರೂ ಧ್ಯಾನ್‌ರನ್ನು 'ದಾದಾ' ಎಂದು ಪ್ರೀತಿಯಿಂದ ಕರೆಯುತ್ತಿದ್ದರೆ, ಅವರ ಕೋಚ್ ಪಂಕಜ್ ಗುಪ್ತ ಅವರು 'ಚಾಂದ್' (ಚಂದ್ರ) ಎಂದು ಕರೆಯುತ್ತಿದ್ದರು. ಅಲ್ಲದೇ ತಮ್ಮ ಶಿಷ್ಯ ಚಂದ್ರನಂತೆ ಬೆಳಗುತ್ತಾನೆ ಎಂದೂ ಭವಿಷ್ಯ ನುಡಿದಿದ್ದರು. ಅವರ ಮಾತು ನಿಜವೂ ಆಯಿತು.

ಉತ್ತರ ಪ್ರದೇಶದ ಪ್ರಯಾಗ್‌ನಲ್ಲಿ ರಜಪೂತ್ ಕುಟುಂಬದಲ್ಲಿ ಆಗಸ್ಟ್ 29, 1905ರಲ್ಲಿ ಧ್ಯಾನ್ ಚಂದ್ ಜನಿಸಿದರು. ಅವರ ತಂದೆ ಭಾರತೀಯ ಬ್ರಿಟಿಷ್ ಸೈನ್ಯದಲ್ಲಿ ಹವಾಲ್ದಾರ್ ಆಗಿದ್ದರು. ಪ್ರಯಾಗದಿಂದ ತದನಂತರ ಕುಟುಂಬವು ಝಾನ್ಸಿ ನಗರಕ್ಕೆ ವಲಸೆ ಬಂದಿತು. ಧ್ಯಾನ್ ಚಂದ್ ಶಾಲೆಯಲ್ಲಿ ಓದಿದ್ದು ಅತೀ ಕಡಿಮೆ. ಹದಿನಾರನೇ ವಯಸ್ಸಿಗೇ ಸೈನ್ಯಕ್ಕೆ ಸೇರಿದರು. ಕ್ರೀಡೆಯಲ್ಲೂ ಅಂತಹ ವಿಶೇಷ ಪರಿಣತಿ ಇರಲಿಲ್ಲ. ಸೈನ್ಯದಲ್ಲಿ ಸ್ನೇಹ ಪೂರ್ಣ ಪಂದ್ಯಗಳಲ್ಲಿ ಎಲ್ಲರೊಂದಿಗೆ ಆಡುತ್ತಿದ್ದರು. 14ನೇ ಪಂಜಾಬ್ ರೆಜಿಮೆಂಟ್ ಸೇರಿದ ಧ್ಯಾನ್‌ರನ್ನು ಸುಬೇದಾರ್–ಮೇಜರ್ ಭೋಲೆ ತಿವಾರಿಯವರು ಗಮನಿಸಿದರು. ಈತ ಆಡುವ ಆಟದಲ್ಲಿ ಏನೋ ವಿಶೇಷವಿದೆ ಎಂದು ಕಂಡ ಇವರು ಚಂದ್ ಧ್ಯಾನ್‌ರಿಗೆ ವೈಯಕ್ತಿಕವಾಗಿ ನಿಗಾವಹಿಸಿ ಹಾಕಿ ಆಟದ ವಿಶೇಷತೆಗಳ ಬಗೆಗೆ ಉತ್ತಮ ತರಬೇತಿ ನೀಡಿದರು. ಧ್ಯಾನ್‌ಚಂದ್ ಅನ್ನೋ ದಂತಕತೆ ಬೆಳೆಯಲು ಶುರುವಿಟ್ಟಿದ್ದೇ ಹೀಗೆ.

ಹಾಕಿ ಸ್ಟಿಕ್ ಕೆಳಗಿಟ್ಟಿದ್ದು

ಎರಡನೇ ವಿಶ್ವಯುದ್ಧ ಮುಗಿದ ಬಳಕವೂ ಕೆಲಕಾಲ ಆಡಿದ ಧ್ಯಾನ್ ಚಂದ್ 1948ರಲ್ಲಿ ತಮ್ಮ 42ನೇ ವಯಸ್ಸಿನಲ್ಲಿ ಹಾಕಿ ಆಟದಿಂದ ನಿವೃತ್ತರಾದರು. ಧ್ಯಾನ್ ಚಂದ್‌ರ ಸಹೋದರ ರೂಪ್ ಸಿಂಗ್ ಕೂಡ ಉತ್ತಮ ಆಟಗಾರರಾಗಿದ್ದರು. ಧ್ಯಾನ್ ಚಂದರ ಪುತ್ರ ಅಶೋಕ್ ಕುಮಾರ್ ಕೂಡ ಹಾಕಿಯಲ್ಲಿ ಭಾರತವನ್ನು ಪ್ರತಿನಿಧಿಸಿದ್ದಾರೆ. ಧ್ಯಾನ್ ಚಂದ್ ಜನ್ಮದಿನವಾದ ಆಗಸ್ಟ್ 29ರ ದಿನವನ್ನು ಭಾರತದಲ್ಲಿ ಕ್ರೀಡಾ ದಿನವನ್ನಾಗಿ ಆಚರಿಸಲಾಗುತ್ತಿದೆ. 1979ರ ಡಿಸೆಂಬರ್ 3ರಂದು ಅವರು ನಿಧನರಾದರು.

ಧ್ಯಾನ್ ಚಂದ್ ಎಂಬ ದ್ರುವ ತಾರೆ ಈಗ ಬದುಕಿದ್ದಿದ್ದರೆ ಭಾರತದಲ್ಲಿ ಕ್ರೀಡಾ ಜಗತ್ತನ್ನು, ಜಾಹೀರಾತು ಜಗತ್ತನ್ನು ಆಳುತ್ತಿರುವ ಕ್ರಿಕೆಟ್ ಪಟುಗಳು ಕೂಡ ಹಿಂದೆ ಸರಿಯುವಂತಹ ಪರಿಸ್ಥಿತಿ ನಿರ್ಮಾಣವಾದರು ಅಚ್ಚರಿ ಇರುತ್ತಿರುಲಿಲ್ಲ.

ಇಂದು ಒಲಿಂಪಿಕ್ ನಲ್ಲಿ ಕಂಚಿನ ಪದಕವೋ, ಬೆಳ್ಳಿಯ ಪದಕವೋ ಬಂದರೆ ಮುಂದಿನ ಒಲಂಪಿಕ್ ವರೆಗೂ ಸಂಭ್ರಮಿಸುತ್ತೇವೆ, ಹೀಗಿರುವಾಗ ಸ್ವಾತಂತ್ರ್ಯಪೂರ್ವದಲ್ಲೇ ಭಾರತ–ಕ್ಕೆ ಒಂದಲ್ಲ, ಎರಡಲ್ಲ ಸತತ ಮೂರು ಒಲಿಂಪಿಕ್ ಗಳಲ್ಲಿ ಚಿನ್ನ ಗೆದ್ದು ಕೊಟ್ಟ ಧ್ಯಾನ್ ಚಂದ್ ರ ಸಾಧನೆ ಸಾಧಾರಣವಲ್ಲ. ಧ್ಯಾನ್ ಚಂದ್ ವಿಶ್ವ ಕ್ರೀಡಾ ಇತಿಹಾಸದಲ್ಲಿ ಅವಿಸ್ಮರಣೀಯರು. ಅವರ ಹಾಕಿ ಆಟಕ್ಕೆ ಮನಸೋಲದವರೇ ಇಲ್ಲ. ತಮ್ಮ ಅದ್ಭುತ ಆಟದಿಂದಾಗಿ ಎದುರಾಳಿ ತಂಡದವರನ್ನು ಮತ್ತು ನೋಡುಗರನ್ನು ಮಂತ್ರಮುಗ್ಧರನ್ನಾಗಿಸುತ್ತಿದ್ದ ಧ್ಯಾನ್ ಚಂದ್ ನಿಜವಾಗಿಯೂ ಭಾರತೀಯರ ಹೆಮ್ಮೆ.

ಅಂದಿನ ಭಾರತೀಯ ಸೈನ್ಯದಲ್ಲಿ ಹಾಗೂ ವಿವಿಧ ವಲಯಗಳ ತಂಡಗಳ ಮಟ್ಟದಲ್ಲಿ ಆಡತೊಡಗಿದ ಧ್ಯಾನ್ ಚಂದ್, ಹಲವು ಅಂತರರಾಷ್ಟ್ರೀಯ ಪಂದ್ಯಗಳ ಬಳಿಕ ಒಲಿಂಪಿಕ್ಸ್ ಪಂದ್ಯಾವಳಿಗೆ ತಲುಪಿ ತಾವು ಆಡಿದ ಮೂರೂ ಒಲಿಂಪಿಕ್ಸ್ ಕ್ರೀಡೆಗಳಲ್ಲೂ ಭಾರತ–ಕ್ಕೆ ಚಿನ್ನದ ಪದಕ ದೊರಕುವಲ್ಲಿ ಮಹತ್ತರವಾದ ಪಾತ್ರ ವಹಿಸಿದರು. ಆಡಿದ ಮೂರು ಒಲಿಂಪಿಕ್ಸ್ ಸ್ಪರ್ಧೆಗಳಲ್ಲಿ ಒಟ್ಟು ಹನ್ನೆರಡು ಪಂದ್ಯಗಳಲ್ಲಿ ಧ್ಯಾನ್ ಚಂದ್ ಗಳಿಸಿದ ಒಟ್ಟು ಗೋಲುಗಳ ಸಂಖ್ಯೆ 33. ಆ



ಕಾಲದಲ್ಲಿ ಫುಟ್ ಬಾಲ್ ಆಟದಲ್ಲಿ ಪೀಲೆ, ಕ್ರಿಕೆಟ್ಟಿನಲ್ಲಿ ಡೊನಾಲ್ಡ್ ಬ್ರಾಡ್ ಮನ್ ಅವರ ಸಾಧನೆಗಳು ಎಂತಿವೆಯೋ ಅಂತದ್ದೇ ಮಟ್ಟದ ಹೆಸರು ಧ್ಯಾನ್ ಚಂದ್ ಅವರದ್ದು. ಧ್ಯಾನ್ ಚಂದ್ ಆಟಕ್ಕೆ ಬೆರಗಾಗಿದ್ದ ಜಪಾನ್ ಒಮ್ಮೆ ಧ್ಯಾನ್ ಚಂದ್ ಬಳಸುವ ಹಾಕಿ ಸ್ಟಿಕ್ ಪರೀಕ್ಷಿಸಲು ಮುಂದಾಗಿತ್ತಂತೆ. ಅವರ ಹಾಕಿ ಸ್ಟಿಕ್ ನಲ್ಲಿ ಮ್ಯಾಗ್ನೆಟ್ ಇರಬಹುದು, ಇಲ್ಲವೇ ಗ್ಲೂ ಇರಬಹುದು ಎಂದು ಸಂಶಯ ಪಟ್ಟಿದ್ದು ವಿಶ್ವಾದ್ಯಂತ ಸುದ್ದಿಯಾಗಿತ್ತು. ಧ್ಯಾನ್ ಚಂದ್ ರ ಜನಪ್ರಿಯತೆ ಮತ್ತು ಜಾಣ್ಮೆ: ಒಮ್ಮೆ ಧ್ಯಾನ್ ಚಂದ್ ಅವರು ಆಡಿದ ಪಂದ್ಯದಲ್ಲಿ ಅವರಿಗೆ ಒಂದೂ ಗೋಲು ಗಳಿಸಲು ಸಾಧ್ಯವಾಗಲಿಲ್ಲವಂತೆ. ಕಡೆಗೆ ಧ್ಯಾನ್ ಚಂದ್ ಅವರು ಮ್ಯಾಚ್ ರೆಫರಿ ಅವರೊಂದಿಗೆ ವಾಗ್ವಾದ ಹೂಡಿ ನೇರವಾಗಿ "ಈ ಕ್ರೀಡಾಂಗಣದಲ್ಲಿ ಇರುವ 'ಗೋಲ್ ಪೋಸ್ಟ್' ಅಳತೆ ಅಸಮರ್ಪಕವಾದುದು, ಹಾಕಿ ಆಟದ ಅಂತರರಾಷ್ಟ್ರೀಯ ನಿಯಮಾವಳಿಗಳಿಗೆ ವ್ಯತಿರಿಕ್ತವಾದದ್ದು" ಎಂದು ನುಡಿದರಂತೆ. ಧ್ಯಾನ್ ಚಂದ್ ಅವರ ಅಭಿಪ್ರಾಯವನ್ನು ಮನ್ನಿಸಿ ನಿಜವಾದ ಅಳತೆ ಮಾಡಿದಾಗ ಧ್ಯಾನ್ ಚಂದ್ ಅವರ ಅಭಿಪ್ರಾಯ ಅಕ್ಷರಷಃ ನಿಜವಾಗಿತ್ತು. 1936ರ ಒಲಿಂಪಿಕ್ಸ್ ಪಂದ್ಯದಲ್ಲಿ ಭಾರತ ತಂಡವು ಜಯಗಳಿಸಿದ ನಂತರದಲ್ಲಿ, ಎಲ್ಲೆಡೆಯಲ್ಲೂ ಧ್ಯಾನ್ ಚಂದ್ ಅವರ ಹಾಕಿ ಮಾಂತ್ರಿಕತೆಯ ಆಟ ಪ್ರಸಿದ್ಧಿ ಪಡೆದು, ಪ್ರೇಕ್ಷಕರು ಇವರ ಆಟ ನೋಡಲು ಮುಗಿಬೀಳುತ್ತಿದ್ದರು. ಒಂದು ಜರ್ಮನ್ ಪತ್ರಿಕೆ "ಹಾಕಿ ಆಟ ಇದೀಗ ಮ್ಯಾಜಿಕ್ ಷೋ ಕೂಡಾ ಆಗಿದೆ. ಭಾರತೀಯ ಹಾಕಿ ಆಟದ ಮ್ಯಾಜಿಕ್ ವ್ಯಕ್ತಿಯಾದ ಧ್ಯಾನ್ ಚಂದ್ ಅವರ ಆಟ ನೋಡಲಿಕ್ಕೆ ಇಂದು ಹಾಕಿ ಕ್ರೀಡಾಂಗಣಕ್ಕೆ ತಪ್ಪದೆ ಬನ್ನಿ". ಎಂದು ವರದಿ ನೀಡಿತ್ತು. ಅಪ್ಪಟ ದೇಶಪ್ರೇಮಿ ಧ್ಯಾನ್ ಚಂದ್ : ಬರ್ಲಿನ್ ಒಲಿಂಪಿಕ್ಸ್ ಕ್ರೀಡೆಗಳಲ್ಲಿ ಧ್ಯಾನ್ ಚಂದ್ ಅವರ ಆಟ ಕಂಡ ಅಡೋಲ್ಫ್ ಹಿಟ್ಲರ್ ಧ್ಯಾನ್ ಚಂದ್ ಅವರಿಗೆ "ಬ್ರಿಟಿಷ್ ಸೇನೆಯಲ್ಲಿ ಮೇಜರ್ ಹುದ್ದೆ, ಜರ್ಮನಿಯ ಪೌರತ್ವ, ಕೊಲೋನೆಲ್ ಗೌರವದ ಕೊಡುಗೆ ನೀಡಲು ಆಹ್ವಾನಿಸಿದ್ದರು, ಆದರೆ ಇದನ್ನು ತಿರಸ್ಕರಿದ ಧ್ಯಾನ್ ಚಂದರು ನಾನೊಬ್ಬ ಅಪ್ಪಟ ಭಾರತೀಯ, ಭಾರತದಲ್ಲೇ ನಾನು ಹಾಯಾಗಿದ್ದೇನೆ ಎಂದು ನಯವಾಗಿ ಹೇಳಿ ದೇಶಪ್ರೇಮ ಮೆರೆದಿದ್ದರು. ಧ್ಯಾನ್ ಚಂದ್ ಜನಪ್ರಿಯತೆ ಎಷ್ಟಿತ್ತೆಂದರೆ ಭಾರತಕ್ಕೂ ಮೊದಲೇ ಅವರ ಪುತ್ಥಳಿಯನ್ನು ಆಸ್ಟ್ರಿಯಾದ ವಿಯೆನ್ನಾದಲ್ಲಿ ಸ್ಥಾಪಿಸಲಾಗಿತ್ತು. ಹೀಗೆ ಭಾರತದ ಒಬ್ಬ ಆಟಗಾರ ತನ್ನ ಮಹೋನ್ನತ ಸಾಧನೆಗಳಿಂದ ದಂತಕತೆಯಾಗಿರುವುದು ಭಾರತೀಯರಿಗೆಲ್ಲಾ ಮಹೋನ್ನತವಾದ ಹೆಮ್ಮೆ.





ಎರಡು ಚಿನ್ನದ ಪದಕ ಪಡೆದ ಚಿಕ್ಕಬಾಣಾವರದ ಪೂಜಶ್ರೀ ಚಿಕ್ಕಣ್ಣ

ಕಾಯಕಯೋಗಿ ಸುದ್ದಿ

ದಾಸರಹಳ್ಳಿ: ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಚಿಕ್ಕಬಾಣಾವರದ ಪೂಜಶ್ರೀ ಚಿಕ್ಕಣ್ಣ ಅವರು ಕೇರಳ ರಾಜ್ಯದ ಕೋಝಿಕೋಡಿನಲ್ಲಿ ಮೇ 24 ರಿಂದ 26 ರ ವರೆಗೆ ನಡೆದ 19ನೇ ಸೌತ್ ಮತ್ತು ವೆಸ್ಟ್ ಇಂಡಿಯಾ ಟೈಕೊಂಡ ಐ ಟಿ ಎಫ್ ಚಾಂಪಿಯನ್ಶಿಪ್ ನಲ್ಲಿ ಕೋಚರ್ ನವೀನ್ ರಾಜ್ ಅವರ ಮಾರ್ಗದರ್ಶನದಲ್ಲಿ ಬ್ಲೂಬೆಲ್ಟ್ ವಿಭಾಗದಿಂದ 14 ರಿಂದ 18 ವರ್ಷ ವಯೋಮಿತಿಯಲ್ಲಿ ವೈಯಕ್ತಿಕ ಸ್ಪಾರಿಂಗ್ ನಲ್ಲಿ ಮೊದಲನೇ ಸ್ಥಾನ ಚಿನ್ನದ ಪದಕ ಪಡೆದು ಮತ್ತು ಗ್ರೂಪ್ ಪ್ಯಾಟರ್ನ್ಸ್ ನಲ್ಲಿ ಮೊದಲನೇ ಸ್ಥಾನ ಚಿನ್ನದ ಪದಕ ಪಡೆದು ಒಟ್ಟು ಎರಡು ಚಿನ್ನದ ಪದಕಗಳನ್ನು ಪಡೆದುಕೊಂಡಿದ್ದಾರೆ.

ಕುಮಾರಿ ಸುನಿಧಿ ಮಂಜುನಾಥ್ ರಂಗ ಪ್ರವೇಶ



ಕಾಯಕಯೋಗಿ ಸುದ್ದಿ

ಬೆಂಗಳೂರು: ಹಾವೀರ ಲಲಿತಾಕಲಾ ಅಕಾಡೆಮಿಯ ಗುರು ವಿದುಷಿ ತನುಜಾ ಜೈನ್ ಅವರು ತಮ್ಮ ಶಿಷ್ಯೆ 15ರ ಹರೆಯದ ಕುಮಾರಿ ಸುನಿಧಿ ಮಂಜುನಾಥ್ ರಂಗ ಪ್ರವೇಶ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಮಹಾವೀರ ಲಲಿತಕಲಾ ಅಕಾಡೆಮಿ ಹಾಗೂ ಸುಮೇರು ಟ್ರಸ್ಟ್ ನ ಸಹಯೋಗದಲ್ಲಿ ನಡೆಯಿತು. ಕುಮಾರಿ ಸುನಿಧಿ 8ನೇ ವಯಸ್ಸಿಗೆ ಗುರುಗಳಲ್ಲಿ ನೃತ್ಯಾಭ್ಯಾಸ ಆರಂಭಿಸಿದರು. ಗುರುಗಳಾದ ವಿದುಷಿ ತನುಜಾರವರು ಆಗಸ್ಟಸೆಪೆಂಬರ್ ಹೊತ್ತಿಗೆರಂಗಪ್ರವೇಶ ಮಾಡುವ ಉದ್ದೇಶ ಹೊಂದಿದ್ದರು. ಕುಮಾರಿ ಸುನಿಧಿ ತನ್ನ ಪಿಯುಸಿಯನ್ನು ಕಾರ್ಕಳದಲ್ಲಿ ಮುಂದುವರೆಸುವ ಉದ್ದೇಶವಿರುವುದರಿಂದ ಮುಂಚೆಯೇ ರಂಗ ಪ್ರವೇಶ ಹಮ್ಮಿಕೊಳ್ಳಲಾಗಿತ್ತು.

ರಂಗಪ್ರವೇಶಕ್ಕೆಸುನಿಧಿಯತಯಾರಿ ಪರಿಶ್ರಮ ಶ್ರದ್ಧೆಯನ್ನು ಅವಳ ಗುರುಗಳು ಮುಕ್ತ ಕಂಠದಿಂದ ಹೊಗಳಿದರು. 2 ತಿಂಗಳಕಾಲದಲ್ಲಿ ಸುಮಾರು 5–6 ತಾಸುಗಳ ಸತತ ಅಭ್ಯಾಸದಿಂದ ಅದ್ಭುತವಾದ ನೃತ್ಯ ಪ್ರದರ್ಶನವನ್ನು ಸುನಿಧಿಯು ಮಾಡಿದಳು.

ಡಾ. ರೂಪಾ ಮಂಜುನಾಥ್ ಹಾಗೂ ಡಾ. ಮಂಜುನಾಥ್ ಪಾಳ್ಯ ಇವರ ಏಕೈಕ ಪುತ್ರಿಯಾಗಿರುವ ಕುಮಾರಿ ಸುನಿಧಿಯು ಬಹಳ ಸೌಮ್ಯ ಹಾಗೂ ಶಾಂತ ಸ್ವಭಾವದ ಹುಡುಗಿ. ತಂದೆ ಮತ್ತು ತಾಯಿಯರು ಉಪನ್ಯಾಸಕ ವೃತ್ತಿಯಲ್ಲಿರುವುದರಿಂದ ತಮ್ಮ ಅಜ್ಜ–ಜ್ಜಿಯ ಜೊತೆಗೆ ಹೆಚ್ಚು ಸಮಯ ಕಳೆಯುವುದರಿಂದ ಗುರುಹಿರಿಯರೊಂದಿಗೆ ವಿನಮ್ರ ಹಾಗೂ ಪ್ರೀತಿಯ ಸಂಬಂಧವನ್ನು ಹೊಂದಿದ್ದಾರೆ.

ಹಿರಿಯ ಸಾಹಿತಿಗಳಾದ ಡಾ. ನರಹಳ್ಳಿ ಬಾಲ ಸುಬ್ರಮಣ್ಯ, ಮಹಾಬಲ ಮೂರ್ತಿ ಕೂಡ್ಲೇಕೆರೆ, ಡಾ.ಪ್ರಮೀಳಾ ಮಾಧವ್, ಡಾ. ಸುರೇಶ ಪಾಟೀಲ, ಡಾ. ಆಶಾದೇವಿ ಎಂ ಎಸ್, ಡಾ. ಕೆ. ಪಿ ಭಟ್, ಡಾ. ಸುಮಿತ್ರ ಎಂ, ಡಾ. ಸಿ.ಬಿ. ಹೊನ್ನುಸಿದ್ಧಾರ್ಥ, ಡಾ. ರಘುರಾಂ ಮೊದಲಾದ ಸಾಹಿತಿಗಳು, ಸುನಿಧಿಯ ಪೋಷಕರ ಗುರುಗಳು, ಹೀಗೆ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ ಹಾಗೂ ಬೆಂಗಳೂರಿನ ಹಲವಾರು ಕಾಲೇಜುಗಳ ಉಪನ್ಯಾಸಕರ ದೊಡ್ಡ ಬಳಗ, ಸಂಬಂಧಿಕರು ಉಪಸ್ಥಿತರಿದ್ದು ಹರಸಿದರು.

ದುಶ್ಚಟ ದೂರವಾಗಿಸಲು ಕ್ರೀಡೆ ತುಂಬಾ ಸಹಕಾರಿ

ಕಾಯಕಯೋಗಿ ಸುದ್ದಿ

ದೇವನಹಳ್ಳಿ: ಯುವಕರು ದುಶ್ಚಟಗಳಿಗೆ ದಾಸರಾಗದಂತೆ ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಲು ಕ್ರೀಡೆಗಳು ಸಹಕಾರಿಯಾಗಿವೆ ಎಂದು ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿ ಕಾರ ನಿಗಮದ ನಿರ್ದೇಶಕ ಸಿ.ಪ್ರಸನ್ನಕುಮಾರ್ ತಿಳಿಸಿದರು.

ದೇವನಹಳ್ಳಿ ತಾಲೂಕಿನ ಆರುವನಹಳ್ಳಿ ಗ್ರಾಮದಲ್ಲಿ ಜೆಸಿಐ ಚಪ್ಪರಕಲ್ಲು ಚಂದನ ಘಟಕದ ವತಿಯಿಂದ ಏರ್ಪಡಿಸಿದ್ದ ಜೆಸಿಸಿ ಕ್ರಿಕೆಟ್ ಕಪ್ ಪಂದ್ಯಾವಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಕರನ್ನು ಸರಿದಾರಿಗೆ ಕರೆತರುವ ಉದ್ದೇಶದಿಂದ ಕ್ರೀಡಾಕೂಟ ಆಯೋಜಿಸ ಲಾಗಿದೆ. ಗುರು–ಹಿರಿಯರಿಗೆ ಹೇಗೆ ಗೌರವಿಸಬೇಕು ಎಂಬು ವುದರ ಬಗ್ಗೆ ಅರಿವು ಮೂಡಿಸು ವುದು, ಜೆಸಿಐನಿಂದ ಪರಿಸರ ಸಂರಕ್ಷಣೆ, ಜಾಗೃತಿ ಜಾಥಾ,ಕೌಟುಂಬಿಕ ಹೆಚ್ಚಿಚ್ಚು ಭಾಗವಹಿಸುವಂತೆ ಆಗಬೇಕು ಎಂದರು.

– ಶಿವಾಜಿಗೌಡ

ನಿಕಟಪೂರ್ವ ಅಧ್ಯಕ್ಷ, ಜೆಸಿಐ ಚಚಂಫ

ಜೆಸಿಐ ಸಂಸ್ಥೆಯಿಂದ ಪ್ರತಿವರ್ಷವೂ ಹಲವಾರು ಕಡೆಗಳಲ್ಲಿ ಕ್ರೀಡೆಗಳನ್ನು ಆಯೋಜಿಸಿಕೊಂಡು ಬರುತ್ತಿದೆ. ಕ್ರೀಡೆಗಳತ್ತ ಯುವಕರನ್ನು ಸೆಳೆಯುವಂತಹ ಕಾರ್ಯವಾಗುತ್ತಿದೆ. ಸಮಾಜಮುಖಿ ಕೆಲಸಗಳನ್ನು ಸಹ ಕ್ರೀಡೆ ಮತ್ತು ಆರೋಗ್ಯ ಶಿಬಿರಗಳನ್ನು ಆಯೋಜಿಸಿ ಜೊತೆಜೊತೆಗೆ ಮಾಡಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದರು.ಬ್ಲಾಕ್ ಕಾಂಗ್ರೆಸ್ ಕುಂದಾಣ ಹೋಬಳಿ ಅಧ್ಯಕ್ಷ ಕೋದಂಡರಾಮ್ ಮಾತನಾಡಿ, ಇಂತಹ ಕಾರ್ಯಕ್ರಮಗಳನ್ನು ಗ್ರಾಮೀಣ ಭಾಗದಲ್ಲಿ ಮಾಡುತ್ತಿರುವುದು ಈ ಪ್ರದೇಶದಲ್ಲಿ ಯುವಕರಲ್ಲಿ ಉತ್ಸಾಹವನ್ನು ಮೂಡಿಸುವಂತಾಗಿದೆ. ಆರೋಗ್ಯವೂ ಸಹ ಉತ್ತಮವಾಗಿರುತ್ತದೆ ಎಂದು ಹೇಳಿದರು.



ಸುತ್ತಮುತ್ತಲಿನ ಸಹಕಾರದಲ್ಲಿ ಸಂಸ್ಥೆಯಿಂದ ಕ್ರಿಕೆಟ್ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. 12 ತಂಡಗಳು ಭಾಗಿಯಾಗಿವೆ. ಪ್ರತಿ ವರ್ಷವೂ ಎರಡೆರಡು ಆರೋಗ್ಯ ಮತ್ತು ಜಾಗೃತಿ ಶಿಬಿರಗಳನ್ನು ಶಾಲಾ ಕಾಲೇಜುಗಳಲ್ಲಿ ಮಾಡಲಾಗುತ್ತಿದೆ. ಸಂಸ್ಥೆಯಿಂದ ಹಲವಾರು ಸಾಮಾಜಿಕ ಕಾವ್ಯಗಳನ್ನು ಸಹ ಮಾಡಿಕೊಂಡು ಬರಲಾಗುತ್ತಿದೆ.

– ಅಕ್ಷಯ್ ಕುಮಾರ್ ।ಅಧ್ಯಕ್ಷ, ಜೇಸಿಐ ಚಚಂಫ.

ಈ ವೇಳೆ ಕೊಯಿರ ಗ್ರಾಪಂ ಉಪಾಧ್ಯಕ್ಷೆ ಮಮತ ಶಿವಾಜಿಗೌಡ, ಜೆಸಿಐ ಚಪ್ಪರಕಲ್ಲು ಚಂದನ ಘಟಕ ಸಂಸ್ಥಾಪಕ ನೆರಗನಹಳ್ಳಿ ಶ್ರೀನಿವಾಸ್, ಗಿರೀಶ್, ಅನಿಲ್ (ಆನೀ), ಜೇಸಿಐ ಕಾವ್ಯದರ್ಶಿ ವಿನುತ, ಯೋಜನಾ ಪದಾಧಿಕಾರಿಗಳು, ಕ್ರೀಡಾಕೂಟದ ನಿರ್ದೇಶಕ ಜಗದೀಶ್, ಯುವಕರಾದ ತಂಡಗಳು, ಗ್ರಾಮಸ್ಥರು ಇದ್ದರು.

ಜಿಲ್ಲಾ ಜನಜಾಗೃತಿ ವೇದಿಕೆ ಪದಾಧಿಕಾರಿಗಳ ಸಭೆ



ಕಾಯಕಯೋಗಿ ಸುದ್ದಿ

ದೇವನಹಳ್ಳಿ: ತಾಲೂಕಿನ ಚಪ್ಪರದಕಲ್ಲು ಕೃಷ್ಣೋದಯ ಕಲ್ಯಾಣ ಮಂಟಪ ಸಭಾಂಗಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ (ರಿ),ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ (ರಿ) ಮತ್ತು ಬೆಂಗಳೂರು ಗ್ರಾಮಾಂತರ/ನಗರ ಜಿಲ್ಲೆಗಳ ಸಂಯುಕ್ತ ಆಶ್ರಯದಲ್ಲಿ"ಬೆಂಗಳೂರು ಗ್ರಾಮಾಂತರ/ನಗರ ಜಿಲ್ಲಾ ಜನಜಾಗೃತಿ ವೇದಿಕೆ ಪದಾಧಿಕಾರಿಗಳ ಸಭೆಯನ್ನು ನಡೆಸಲಾಯಿತು.

ಬೆಂಗಳೂರು ಪ್ರಾದೇಶಿಕ ವಿಭಾಗದ ಗೌರವಾನ್ವಿತ ಪ್ರಾದೇಶಿಕ ನಿರ್ದೇಶಕರಾದ ಶೀನಪ್ಪ. ಎಂ ಪ್ರಾಸ್ತಾವಿಕವಾಗಿ ಮಾತನಾಡಿ ಬೆಂಗಳೂರು ಗ್ರಾಮಾಂತರ/ನಗರ ಜಿಲ್ಲೆಯ ಜನಜಾಗೃತಿ ವೇದಿಕೆಯ ಪದಾಧಿಕಾರಿಗಳು ಸಭೆಯಲ್ಲಿ ಸೇರಿರುವುದು ಖುಷಿ ತಂದ ವಿಚಾರ ಎಂದರು. ಎಲ್ಲಾ ರಂಗದ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದು ಕ್ಷೇತ್ರದ ಮೇಲಿನ ಭಕ್ತಿ ಮತ್ತು ನಂಬಿಕೆಯಿಂದ ಪೂಜ್ಯರ ಸಮಾಜಮುಖಿ ಕಾರ್ಯಕ್ರಮಗಳಿಂದ ಎಂದರು.

ಸಮಾಜ ಸೇವೆಗಳಲ್ಲಿ ಶೌರ್ಯ ಘಟಕದ ಮೂಲಕ ರಾಜ್ಯದ ನಾನಾ ಭಾಗಗಳಲ್ಲಿ ಸುಮಾರು 10000 ಮಂದಿ ಶೌರ್ಯ ತಂಡದ ಸದಸ್ಯರು ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಸೇವೆಯನ್ನು ಸಲ್ಲಿಸುತ್ತಿರುವುದು ಸಂತೋಷದಾಯಕ ವಿಷಯವಾಗಿದೆ ಎಂದು ತಿಳಿಸಿದರು. ಇವತ್ತು ಪೂಜ್ಯರು ರೈತರಿಗಾಗಿ ಕೆರೆ ಹೂಳೆತ್ತುವ ಅಭೂತಪೂರ್ವ ಕಾರ್ಯವನ್ನು ಕೈಗೊಂಡಿದ್ದಾರೆ, ದೇವಸ್ಥಾನ, ರುದ್ರ ಭೂಮಿ, ಶಾಲೆಗಳಿಗೆ ಜ್ಞಾನದೀಪ ಶಿಕ್ಷಕರು, ಬೆಂಚು ವಿತರಣೆ, ಹಾಲು ಉತ್ಪಾದಕರ ಕಟ್ಟಡಕ್ಕೆ ಅನುದಾನ, ಶುದ್ಧ ನೀರಿನ ಘಟಕ ಸೇರಿ ಹಲವಾರು ಅವಿರಥ ಸೇವೆಗಳನ್ನು ಪೂಜ್ಯರು ನೀಡುತ್ತಾ ಬಂದಿದ್ದಾರೆ. ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಕಾರ್ಯಕ್ರಮ ಒಂದು